ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಜನವರಿ 11 ರಿಂದ ನ್ಯೂಜಿಲೆಂಡ್ ತಂಡದ ವಿರುದ್ಧ 3 ಏಕದಿನ ಹಾಗು 5 ಟಿ-20 ಪಂದ್ಯಗಳ ಸರಣಿಯನ್ನು ಭಾರತ ತಂಡ ಆಡಲಿದೆ.

23 ಡಿಸೆಂಬರ್ 2025 ಮಂಗಳವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 281 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ವಿಯೆಟ್ನಾಮ್ : ಕಲೆ, ಸಂಸ್ಕೃತಿಯ ವಿಟಮಿನ್ » 2


ದ್ವೇಷ ಭಾಷಣ ವಿಧೇಯಕ ತಡೆಗೆ ಒತ್ತಾಯ » 3


ಬೆಂಗಳೂರಿನಲ್ಲಿ ಮತ್ತಷ್ಟು ಹಿಗ್ಗಲಿದೆ ಮೆಟ್ರೋ ವ್ಯಾಪಿ » 4

# ನಾಯಕತ್ವ ಸಮಸ್ಯೆ ಹೈಕಮಾಂಡ್ ಬಗೆಹರಿಸುತ್ತೆ

## ಬದಲಾವಣೆ ರಾಹುಲ್ ಗಾಂಧಿ ತೀರ್ಮಾನಿಸಬೇಕು: ಸಿದ್ದರಾಮಯ್ಯ

• ಪ್ರಜೋದಯ ವರದಿ

**ಬೆಂಗಳೂರು:** ನಾಯಕತ್ವ ಬದಲಾವಣೆ ಬಗ್ಗೆ ರಾಹುಲ್ ಗಾಂಧಿ ತೀರ್ಮಾನಿಸಬೇಕು. ಅವರು ಕೈಗೊಳ್ಳುವ ನಿರ್ಧಾರಕ್ಕೆ ನಾವು ಬದ್ಧವೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಸೋಮವಾರ ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಈ ಬಗ್ಗೆ ಪಕ್ಷದ ವರಿಷ್ಠರೊಂದಿಗೆ ಮಾತನಾಡಿದ್ದೇನೆ. ನಾವು ತೀರ್ಮಾನಿಸುತ್ತೇವೆಂದು ಹೇಳಿದ್ದಾರೆ. ಅಲ್ಲಿಗೆ ಎಲ್ಲವೂ ಮುಗಿಯಿತು ಎಂದರು.

ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ ಎಂಬ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆ ಒಪ್ಪಬೇಕಾದ ವಿಚಾರ. ಪಕ್ಷಕ್ಕಿಂತ ಯಾರೂ ದೊಡ್ಡವರಾಗಲು ಸಾಧ್ಯವೇ ಇಲ್ಲ. ಸಮಸ್ಯೆಗಳೇನಿದ್ದರೂ ಅದನ್ನು ಹೈಕಮಾಂಡ್ ಬಗೆಹರಿಸುತ್ತದೆ ಎಂದು ಹೇಳಿದರು.

ನಾಯಕತ್ವ ಬದಲಾವಣೆ ಕುರಿತು ಮಾಧ್ಯಮದಲ್ಲೇ ಹೆಚ್ಚಾಗಿ ಚರ್ಚೆಯಾಗುತ್ತಿದೆ. ಆ ವಿಷಯದಲ್ಲಿ ಇಷ್ಟೊಂದು ಪ್ರಶ್ನಿಸುವ ಅಗತ್ಯವೇನಿದೆ. ವಿಧಾನ ಸಭೆಯಲ್ಲಿ ಹೇಳಿದ ಮೇಲೂ ಮತ್ತೆ ಚರ್ಚಿಸುವ ಅಗತ್ಯವಿಲ್ಲವೆಂದು ಪ್ರತಿಪಾದಿಸಿದ ಅವರು, ಸಂಕ್ರಾಂತಿಗೆ ಕ್ರಾಂತಿಯೂ ಇಲ್ಲ, ಏನೂ ಇಲ್ಲ. ಏನೇ ಇದ್ದರೂ ಹೈಕಮಾಂಡ್ ತೀರ್ಮಾನವೇ ಅಂತಿಮವೆಂದು ಪುನರುಚ್ಚರಿಸಿದರು.



ಮಾಜಿ ಸಚಿವ ಕೆ.ಎನ್.ರಾಜಣ್ಣ ಹಾಗು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ ಬಗ್ಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಪಕ್ಷದ ಅಧ್ಯಕ್ಷರನ್ನು ಯಾರಾದರೂ ಭೇಟಿಯಾದರೆ ತಪ್ಪೇನೂ ಇಲ್ಲ. ಅಧಿಕಾರದಲ್ಲಿದ್ದಾಗ ನಾನು ಮಾಡಿದೆ, ಅವರು ಮಾಡಿದರು ಎನ್ನುವುದು ಮುಖ್ಯವಲ್ಲ. ಅದರ ಪ್ರಶ್ನೆಯೇ ಇಲ್ಲ. ಎಸ್.ಎಂ.ಕೃಷ್ಣ ಅವರು ಆಗ ಮುಖ್ಯಮಂತ್ರಿ ಆಗಿದ್ದರು ಸರ್ಕಾರ ಮಾಡಿತ್ತು ಎಂದು ಕೆ.ಎನ್.ರಾಜಣ್ಣ ಅವರನ್ನು ಅಪೆಕ್ಸ್ ಬ್ಯಾಂಕ್ ಅಧ್ಯಕ್ಷನನ್ನಾಗಿಸಿದ್ದು ನಾನೇ ಎಂಬ ಡಿ.ಕೆ.ಶಿವಕುಮಾರ್ ಹೇಳಿಕೆಗೆ ತಿರುಗೇಟು ನೀಡಿದರು.

**ಖರ್ಗೆ ಭೇಟಿಯಾದ ಪರಮೇಶ್ವರ್**

ಮುಖ್ಯಮಂತ್ರಿ ಸ್ಥಾನ ಬದಲಾವಣೆ ಚರ್ಚೆ ನಡುವೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಈ ಭೇಟಿಯ ಹಿಂದೆ ರಾಜಕೀಯ ಚರ್ಚೆಯ ಉದ್ದೇಶ ಇಲ್ಲವೆಂದು ಅವರು ನಿರಾಕರಣೆ ಮಾಡಿದ್ದಾರೆ. ಆದರೆ, ರಾಜ್ಯದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಯ ಹಿನ್ನಲೆಯಲ್ಲಿ ಅವರ ಭೇಟಿ ಮಹತ್ವ ಪಡೆದುಕೊಂಡಿದೆ.

### ಇಂದು ದೆಹಲಿಗೆ ಡಿ.ಕೆ.ಶಿವಕುಮಾರ್

ಮುಖ್ಯಮಂತ್ರಿ ಸ್ಥಾನದ ಅಧಿಕಾರ ಹಂಚಿಕೆ ಕುರಿತ ಬಿಕ್ಕಟ್ಟು ಮುಂದುವರಿದಿದೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಂಗಳವಾರ ದೆಹಲಿಗೆ ತೆರಳಲು ಅಣಿಯಾಗಿದ್ದಾರೆ. ಡಿ.26 ಮತ್ತು 27 ರಂದು ನಡೆಯಲಿರುವ ಎಐಸಿಸಿ ಕಾರ್ಯಕಾರಿಣಿ ಸಭೆಯ ನೆಪದಲ್ಲಿ, ಅದಕ್ಕೂ ಮುನ್ನ ಡಿ.ಕೆ. ಶಿವಕುಮಾರ್ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲು ಯತ್ನಿಸುತ್ತಿದ್ದಾರೆ. ಮುಖ್ಯವಾಗಿ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ರಾಜ್ಯದ ನಾಯಕತ್ವ ವಿಚಾರವನ್ನು ಬಗೆಹರಿಸಿಕೊಳ್ಳುವ ಉದ್ದೇಶ ಹೊಂದಿದ್ದಾರೆ ಎನ್ನಲಾಗಿದೆ.

**(ಸೋಮವಾರದ ಕಾಫಿ ಧಾರಣೆ: 50 ಕೆ.ಜಿ.ಗೆ)**
**ಅರೇಬಿಕಾ ಪಾರ್ಚ್‌ಮೆಂಟ್ - 26,000 ರೂ.**
**ಅರೇಬಿಕಾ ಚೆರಿ-13,750 ರೂ.**
**ರೊಬಸ್ಟಾ ಪಾರ್ಚ್ ಮೆಂಟ್ -16,500 ರೂ.**
**ರೊಬಸ್ಟಾ ಚೆರಿ - 9,600ರೂ.**
**(ಆರ್‌ಸಿ ಒಟಿ: 335 ರೂ., ಎಸಿ ಒಟಿ 530 ರೂ.)**

# ಹಳೇಬೀಡಿನಲ್ಲಿ ವೈಭವದ ಶಾಂತಲಾ ಮಹೋತ್ಸವ

• ಪ್ರಜೋದಯ ವರದಿ

**ಹಳೇಬೀಡು:** ಶಾಂತಲಾ ಮಹೋತ್ಸವ ಅಂಗವಾಗಿ ಹಳೇಬೀಡಿನಲ್ಲಿ ವೈಭವದ ಮೆರವಣಿಗೆ ನಡೆಯಿತು.

ಕಲ್ಪತರು ಶಾಲೆ ಆವರಣದಿಂದ ಆರಂಭವಾದ ಮೆರವಣಿಗೆಯಲ್ಲಿ ಕಲಾತಂಡಗಳು ಭಾಗವಹಿಸಿ, ಜನರಿಗೆ ರಸದೌತಣ ಉಣಬಡಿಸಿದರು. ಗಾರುಡಿಗ ಗೊಂಬೆ, ಜೋಕರ್ ಗೊಂಬೆ, ಡೊಳ್ಳು ಕುಣಿತ, ಚಂಡೆ ವಾದನ, ನಂದಿ ಧ್ವಜ ಕುಣಿತ ಮೊದಲಾದ ಜನಪದ ಸೊಗಡಿನ ಮೆರವಣಿಗೆಯಲ್ಲಿ ಸಾಗಿದ ಕಲಾ ತಂಡಗಳು ವಿವಿಧ ಭಂಗಿಯ ಪ್ರದರ್ಶನದೊಂದಿಗೆ ಹೆಜ್ಜೆ ಹಾಕಿ ಸಾಗಿದವು.



ಕಲಾ ಪ್ರದರ್ಶನಗಳು ರಸ್ತೆಯ ಇಕ್ಕೆಲಗಳಲ್ಲಿ ವೀಕ್ಷಿಸುತ್ತಿದ್ದ ಜನರ ಮನ ಸೆಳೆದವು. ರಾಜಗೆರೆ ಶಿವಣ್ಣ, ಅರಸೀಕೆರೆ ಬೋರನಹಳ್ಳಿಯ ಶ್ರೀರಾಮ ಯುವಕ ಸಂಘದ ಗೊಂಬೆ ಕುಣಿತ ಜನರನ್ನು ರಂಜಿಸಿದವು. ನಂದಿ ಧ್ವಜ ಕುಣಿತ ಭಕ್ತಿ ಭಾವ ಮೂಡಿಸಿತು.

ಬೇಲೂರಿನ ಅಭಿಮನ್ಯು ತಂಡದವರ ಡೊಳ್ಳಿನ ಸದ್ದು ಗಮನ ಸೆಳೆಯಿತು. ಹೊಯ್ಸಳರ ಸ್ತಬ್ಧ ಚಿತ್ರ ಹಾಗು ಚಂಡೆ ವಾದನ ತಂಡ ಮನೆ ಮೋಹಕವಾಗಿತ್ತು. ಬೆಳ್ಳಿ ರಥದಲ್ಲಿ ಪುಷ್ಪಗಿರಿಯ ಸೋಮಶೇಖರ ಸ್ವಾಮೀಜಿರವರ ಮೆರವಣಿಗೆ ನಡೆಯಿತು.

ಬೇಲೂರಿನ ಮಹೇಶಗೌಡ ಕೆಂಪೇಗೌಡ ವೇಷ ಧರಿಸಿ ಭಾಗವಹಿಸಿದ್ದರು. ಹಗರೆ ಗ್ರಾಮದ ಸಾಲುಮರದ ಸದಾಶಿವಯ್ಯ ಬಸವೇಶ್ವರ ವೇಷ ಧರಿಸಿ ಆಗಮಿಸಿದ್ದರು. ಪುಷ್ಪಗಿರಿ ಗ್ರಾಮಾಭಿವೃದ್ಧಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಸ್ವ ಸಹಾಯ ಸಂಘದ ಮಹಿಳಾ ಸದಸ್ಯರು ಮೆರವಣಿಗೆಯ ಮೆರುಗು ಹೆಚ್ಚಿಸಿದರು.

ಕಲಾ ತಂಡಗಳ ಮೆರವಣಿಗೆ ನಾಡಿನ ಕಲೆ ಸಂಸ್ಕೃತಿಯನ್ನು ಅನಾವರಣಗೊಳಿಸಿತು. ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಮೆರವಣಿಗೆಗೆ ಚಾಲನೆ ನೀಡಿದರು. ಮಾಜಿ ಶಾಸಕ ಕೆ.ಎಸ್.ಲಿಂಗೇಶ್, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಗ್ರಾನೈಟ್ ರಾಜಶೇಖರ್, ಕೃಷಿ ಪತ್ತಿನ ಸಂಘದ ಅಧ್ಯಕ್ಷ ಎಂ.ಕೆ.ಹುಲೀಗೌಡ, ಮುಖಂಡರಾದ ಮಲ್ಲಿಕಾರ್ಜುನ, ಶಿವಲಿಂಗೇಗೌಡ ಪಾಲ್ಗೊಂಡಿದ್ದರು.

# ಆಲೂರು ತಾಲ್ಲೂಕು ಕಚೇರಿಗೆ ಹುಸಿ ಬಾಂಬ್ ಬೆದರಿಕೆ

- ಸಿಬ್ಬಂದಿ, ಸಾರ್ವಜನಿಕರಲ್ಲಿ ಕೆಲಕಾಲ ಭಯದ ವಾತಾವರಣ
- ಪೊಲೀಸರಿಂದ ತಪಾಸಣೆ, ಶಾಸಕರ ಭೇಟಿ

• ಪ್ರಜೋದಯ ವರದಿ

**ಆಲೂರು:** ತಾಲ್ಲೂಕು ಕಚೇರಿಗೆ ಬಾಂಬ್ ಇಟ್ಟಿರುವುದಾಗಿ ಇ-ಮೇಲ್ ಮೂಲಕ ಬೆದರಿಕೆ ಸಂದೇಶ ರವಾನಿಸಿದ್ದರಿಂದ ಸೋಮವಾರ ತಾಲ್ಲೂಕು ಕಚೇರಿ ಸಿಬ್ಬಂದಿ ಹಾಗು ಸಾರ್ವಜನಿಕರಲ್ಲಿ ಕೆಲಕಾಲ ಭಯದ ವಾತಾವರಣ ನಿರ್ಮಾಣಗೊಂಡಿತ್ತು.

ತಾಲ್ಲೂಕು ಕಚೇರಿಯ ಅಧಿಕೃತ ಇ-ಮೇಲ್‌ಗೆ ಮುಂಜಾನೆ 3.04ರ ಸುಮಾರಿಗೆ ಗೈನ ರಮೇಶ್ ಎಂಬ ಹೆಸರಿನಲ್ಲಿ ಸಂದೇಶ ಬಂದಿದ್ದು, ತಾಲ್ಲೂಕು ಕಚೇರಿಯಲ್ಲಿ ಎರಡು ಆರ್‌ಡಿಎಕ್ಸ್ ಬಾಂಬ್ ಇಡಲಾಗಿದೆ. ಮಧ್ಯಾಹ್ನ 1 ಗಂಟೆಯೊಳಗೆ ಸ್ಫೋಟಿಸಲಾಗುವುದೆಂದು ಉಲ್ಲೇಖಿಸಲಾಗಿತ್ತು. ಭಾನುವಾರ ರಜೆ ಇದ್ದ ಕಾರಣ ಸೋಮವಾರ ಬೆಳಿಗ್ಗೆ ಎಂದಿನಂತೆ ಕರ್ತವ್ಯಕ್ಕೆ ಹಾಜರಾದ ಸಿಬ್ಬಂದಿ ಕಂಪ್ಯೂಟರ್‌ಗಳನ್ನು ಆನ್ ಮಾಡಿದ್ದಾಗ ಇ-ಮೇಲ್ ಪರಿಶೀಲಿಸುವ ವೇಳೆ ಈ ಸಂದೇಶ ಕಂಡು ಬಂದಿದೆ.

ತಕ್ಷಣವೇ ಸಿಬ್ಬಂದಿ ತಹಶೀಲ್ದಾರ್ ಮಲ್ಲಿಕಾರ್ಜುನ ಅವರಿಗೆ ವಿಷಯ ತಿಳಿದರು. ಅವರು ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದರು. ಠಾಣೆಗೆ ಪಕ್ಕದಲ್ಲೇ ಇರುವ ತಾಲ್ಲೂಕು ಕಚೇರಿಗೆ ಪೊಲೀಸರು ಧಾವಿಸಿ, ಸಿಬ್ಬಂದಿ, ಸಾರ್ವಜನಿಕರನ್ನು ಹೊರಗೆ ಕಳುಹಿಸಿದರು. ನಂತರ ಬಾಂಬ್ ನಿಷ್ಕ್ರಿಯ ದಳ, ಶ್ವಾನದಳ ಹಾಗು ಹಿರಿಯ ಪೊಲೀಸ್ ಅಧಿಕಾರಿಗಳು ಆಗಮಿಸಿ, ವಿದ್ಯುತ್ ಪೂರಕೆಯನ್ನು ಸ್ಥಗಿತಗೊಳಿಸಿ ಕಟ್ಟಡದ

» ನಾಲ್ಕನೇ ಪುಟದಲ್ಲಿ



**"ಸರ್ಕಾರಿ ಕಚೇರಿಗಳಿಗೆ ನಿರಂತರವಾಗಿ ಬಾಂಬ್ ಬೆದರಿಕೆ ಇ-ಮೇಲ್‌ಗಳು ಬರುತ್ತಿರುವುದು ಗಂಭೀರ ವಿಷಯ. ಇಂತಹ ಚೆಲ್ಲಾಟದಿಂದ ಸಾರ್ವಜನಿಕರು ಹಾಗು ಕಚೇರಿ ಸಿಬ್ಬಂದಿಗೆ ಪ್ರಾಣಸಂಕಟದ ವಾತಾವರಣ ನಿರ್ಮಾಣವಾಗುತ್ತಿದೆ. ಸರ್ಕಾರ ತಕ್ಷಣವೇ ಕಡಿವಾಣ ಹಾಕಬೇಕು.**
**-ಸಿಮೆಂಟ್ ಮಂಜು, ಶಾಸಕ**

# ರೈತರನ್ನು ವಂಚಿಸಿ ಖಾಸಗಿಯವರಿಂದ ಮೆಕ್ಕೆಜೋಳ ಖರೀದಿ

## ಸರ್ಕಾರ, ಕೆಎಂಎಫ್ ವಿರುದ್ಧ ಹೆಚ್.ಡಿ.ರೇವಣ್ಣ ಅಸಮಾಧಾನ

• ಪ್ರಜೋದಯ ವರದಿ

**ಹಾಸನ:** ಸರ್ಕಾರ ನೇರವಾಗಿ ಕೆಎಂಎಫ್ ಮೂಲಕ ರೈತರಿಂದ ಮೆಕ್ಕೆಜೋಳ ಖರೀದಿ ಮಾಡುವ ಬದಲು ವರ್ತಕರಿಂದ ಖರೀದಿಸಿ, ರೈತರನ್ನು ವಂಚಿಸಲಾಗುತ್ತಿದೆ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಆರೋಪಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ 2.40 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ ಬೆಳೆದರೂ ರೈತರಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ. ಸೂಕ್ತ ಬಿತ್ತನೆ ಬೀಜ ಸಿಗದೆ ಹಾಗು ಈ ಬಾರಿ ಅತಿಯಾದ ಮಳೆಯಿಂದ ಶೇ.50ರಷ್ಟು ಮೆಕ್ಕೆಜೋಳ ಬೆಳೆ ನಾಶವಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ರೈತ ಪರವಾಗಿ ನಿಲ್ಲಬೇಕಾದ ಸರ್ಕಾರ ಖಾಸಗಿಯವರಿಗೆ ಲಾಭವಾಗುವಂತೆ ನಡೆದುಕೊಳ್ಳುತ್ತಿದೆ ಎಂದು ದೂರಿದರು.

ಕೆಎಂಎಫ್ ವತಿಯಿಂದ ಖಾಸಗಿಯವರ ಬಳಿ ಈಗಾಗಲೇ 29 ಸಾವಿರ ಮೆಟ್ರಿಕ್ ಟನ್ ಮೆಕ್ಕೆ ಜೋಳ ಖರೀದಿ ಮಾಡಲಾಗಿದೆ. ರೈತರ ಬಳಿ ಕೇವಲ 10 ಸಾವಿರ ಮೆಟ್ರಿಕ್ ಟನ್ ಖರೀದಿ ಮಾಡಲು ಮುಂದಾಗಿದ್ದಾರೆ. ಈ ತಾರತಮ್ಯ ನಿಲ್ಲಬೇಕು. ರೈತ ಪರ ನಿಲ್ಲಬೇಕಿರುವುದು ರಾಜ್ಯ ಸರ್ಕಾರದ ಆದ್ಯ ಕರ್ತವ್ಯ. ಆದರೆ, ಈ ಸರ್ಕಾರ ಖಾಸಗಿಯವರಿಗೆ ಅನುಕೂಲವಾಗುವ ರೀತಿ ನಡೆದುಕೊಳ್ಳುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರ ಖಾಸಗಿಯವರಿಂದ ಮೆಕ್ಕೆಜೋಳ ಖರೀದಿಸುವ ಬದಲು ರೈತರಿಂದಲೇ ನೇರವಾಗಿ ಖರೀದಿಸಲು ಏನು ಸಮಸ್ಯೆ ಎಂದು ಪ್ರಶ್ನಿಸಿದ ಅವರು, ಖಾಸಗಿಯವರು ಒಂದೂವರೆ ತಿಂಗಳ ಹಿಂದೆಯೇ ರೈತರಿಂದ 1500 ರೂ.ಗೆ ಖರೀದಿಸಿ ಈಗ 2500 ರೂ.ಗೆ ಕೆಎಂಎಫ್‌ಗೆ ಮಾರಾಟ ಮಾಡುತ್ತಿದ್ದಾರೆ. ಕೃಷಿ ಅಧಿಕಾರಿಗಳು, ಜಿಲ್ಲಾಧಿಕಾರಿಗಳು ಏನು ಮಾಡುತ್ತಿದ್ದಾರೆಂದು ಪ್ರಶ್ನಿಸಿದರು.

ನಾನು ಕೆಎಂಎಫ್ ಅಧ್ಯಕ್ಷನಾಗಿದ್ದಾಗ ಖಾಸಗಿಯವರನ್ನು ಹತ್ತಿರ ಕೂಡ ಸುಳಿಯಲು ಬಿಟ್ಟಿರಲಿಲ್ಲ. ಖಾಸಗಿ ಪಶು ಆಹಾರ ಘಟಕಗಳನ್ನು ಮುಚ್ಚಿಸಿದ್ದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಸಹಕಾರಿ ಸಚಿವರಾಗಿರುವುದರಿಂದ ಒಂದು ಕ್ವಿಂಟಾಲ್‌ಗೆ 2400ರೂ. ನಂತೆ ರೈತರಿಂದಲೇ ಮೆಕ್ಕೆ ಜೋಳ ಹಾಗು ಪಶು ಆಹಾರಕ್ಕೆ ಅಗತ್ಯವಿರುವ ವಸ್ತುಗಳನ್ನು ಖರೀದಿ ಮಾಡಬೇಕೆಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಹಿಂದೆ ಸುಮಾರು 3 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಆಲೂಗೆಡ್ಡೆ ಬೆಳೆಯುತ್ತಿದ್ದರು. ನಾನು ಕೂಡ 40 ಎಕರೆಯಲ್ಲಿ ಆಲೂಗೆಡ್ಡೆ ಬೆಳೆಯುತ್ತಿದ್ದೆ, ಈ ವರ್ಷ ಮಳೆಯಿಂದ ತೇವಾಂಶ ಹೆಚ್ಚಾಗಿ ಅಂಗಮಾರಿ ರೋಗ ಬಂದ ಕಾರಣಕ್ಕೆ ಇಂದು ಕೇವಲ ಏಳೆಂಟು ಸಾವಿರ ಹೆಕ್ಟೇರ್ ಪ್ರದೇಶಕ್ಕೆ ಇಳಿದಿದೆ.

ಜಿಲ್ಲೆಯಲ್ಲಿ ಮತ್ತೆ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿದ್ದು, ಭಾನುವಾರ ಕೂಡ ಹೃದಯಾಘಾತಕ್ಕೆ ಇಬ್ಬರು ಸಾವನಪ್ಪಿದ್ದಾರೆ. ಕೂಡಲೇ ಹಿಮ್ಸ್‌ನಲ್ಲಿ ಕಾರ್ಡಿಯಾಲಜಿ ಘಟಕ ತೆರೆಯುವಂತೆ ಇದೇ ವೇಳೆ ಒತ್ತಾಯಿಸಿದರು.



**"ಜಿಲ್ಲಾಧಿಕಾರಿ ದಿನನಿತ್ಯ ಕೇವಲ ಅಧಿಕಾರಿಗಳ ಸಭೆ ಮಾಡುವುದರಲ್ಲೇ ನಿರತರಾಗಿದ್ದಾರೆ. ಯಾವ ಅಧಿಕಾರಿಗಳನ್ನು ಕೇಳಿದರೂ ಜಿಲ್ಲಾಧಿಕಾರಿಯೊಂದಿಗೆ ಸಭೆಯಲ್ಲಿದ್ದೇನೆಂದು ಹೇಳುತ್ತಾರೆ. ಆದರೆ, ಅಭಿವೃದ್ಧಿ ಮಾತ್ರ ಆಗುತ್ತಿಲ್ಲ.**
**-ಹೆಚ್.ಡಿ.ರೇವಣ್ಣ, ಮಾಜಿ ಸಚಿವ**

### ನಾಲೆ ಕಾಮಗಾರಿ ಪೂರ್ಣಗೊಳಿಸಿ

ಯಗಚಿ-ಕಾಮಸಮುದ್ರ ನಾಲೆ ಕೆಲಸ ಪೂರ್ಣಗೊಳ್ಳದ ಕಾರಣ 8 ಸಾವಿರ ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಸಿಗುತ್ತಿಲ್ಲ. ಮೊದಲು ಭೂ ಸ್ವಾಧೀನ ಪ್ರಕ್ರಿಯೆ ಅಪೂರ್ಣಗೊಂಡಿರುವುದರಿಂದ ರೈತರಿಗೆ ತೊಂದರೆಯಾಗುತ್ತಿದೆ. ಭೂ ಸ್ವಾಧೀನಕ್ಕೆ ಅಗತ್ಯವಿರುವ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದ ಅವರು, ಎತ್ತಿನಹೊಳೆ, ಮೇಕೆದಾಟು ಆ ಮೇಲೆ ಮಾಡಿಕೊಳ್ಳಿ, ಮೊದಲು ನಾಲೆ ಕಾಮಗಾರಿ ಪೂರ್ಣಗೊಳಿಸಿ ಎಂದು ಹೇಳಿದರು.

### ಸೋರೆಕಾಯಿಪುರ ಶಾಲಾ ಶಿಕ್ಷಕ ಅಮಾನತು

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ತಾಲ್ಲೂಕಿನ ಸೋರೆಕಾಯಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಹರೀಶ್ ಪಾನಮತ್ತನಾಗಿ ಶಾಲೆಗೆ ಹಾಜರಾಗಿ, ವಿದ್ಯಾರ್ಥಿಗಳನ್ನು ಥಳಿಸಿದ್ದ ಪ್ರಕರಣದ ಹಿನ್ನಲೆಯಲ್ಲಿ ಶಿಕ್ಷಣ ಇಲಾಖೆಯೂ ಅಮಾನತು ಮಾಡಿ ಆದೇಶ ನೀಡಿದೆ.

ಡಿ.8 ರಂದು ಶಿಕ್ಷಕ ಮತ್ತು ಅತನ ಪತ್ನಿ ಶಾಲೆಗೆ ಬಂದು ವಿದ್ಯಾರ್ಥಿಗಳನ್ನು ಥಳಿಸಿದ್ದರು. ಈ ಬಗ್ಗೆ ಗ್ರಾಮಸ್ಥರು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಲಿಖಿತ ದೂರು ನೀಡಿದ್ದರು. ಸಿಆರ್‌ಪಿ ಮತ್ತು ಶಿಕ್ಷಣ ಸಂಯೋಜಕರುಗಳ ಪ್ರಕರಣದ ಬಗ್ಗೆ ನೀಡಿರುವ ವರದಿ, ವಿದ್ಯಾರ್ಥಿಗಳ ಹೇಳಿಕೆ ಆಧರಿಸಿ ಹಾಗೂ ಕರ್ತವ್ಯ ಸಮಯದಲ್ಲಿ ಮದ್ಯಪಾನ ಮಾಡಿರುವುದಾಗಿ ಶಿಕ್ಷಕನೇ ಸ್ವ ಅಕ್ಷರದಲ್ಲಿ ಬರೆದು ಕೊಟ್ಟಿರುವ ಹಿನ್ನಲೆಯಲ್ಲಿ ಇಲಾಖೆಯ ವಿಚಾರಣೆ ಕಾಯ್ದಿರಿಸಿ, ಮುಂದಿನ ಆದೇಶದವರೆಗೆ ಅಮಾನತು ಮಾಡಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್.ದೀಪಾ ತಿಳಿಸಿದ್ದಾರೆ.

# ಮಾದರ ಮಹಾಸಭಾ ಸದಸ್ಯತ್ವ ಪಡೆಯಲು ಸಲಹೆ

• ಪ್ರಜೋದಯ ವರದಿ

**ಹಾಸನ:** ಆರ್ಥಿಕ, ಸಾಮಾಜಿಕ ಹಾಗು ಶೈಕ್ಷಣಿಕವಾಗಿ ಏಳಿಗೆ ಹೊಂದಲು ಸಂಘಟಿತ ಹೋರಾಟ ರೂಪಿಸಬೇಕೆಂದರೆ ಸಮುದಾಯದ ಪ್ರತಿಯೊಬ್ಬರು ಸದಸ್ಯತ್ವ ಪಡೆಯಬೇಕೆಂದು ಕರ್ನಾಟಕ ಮಾದರ ಮಹಾಸಭಾ ರಾಜ್ಯ ಸಮಿತಿ ಸದಸ್ಯ ಎಂ. ಆರ್. ವೆಂಕಟೇಶ್ ಅವರು ಹೇಳಿದರು.

ನಗರದ ಸ್ವಾಭಿಮಾನಿ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಸದಸ್ಯತ್ವ ನೋಂದಣಿ ಹಾಗು ಸಮಿತಿ ರಚನೆ ಸಭೆಯಲ್ಲಿ ಮಾತನಾಡಿದ ಅವರು, ಇಡೀ ರಾಜ್ಯದಲ್ಲೇ ಹೋರಾಟದಲ್ಲಿ ಮುಂಚೂಣಿಯಲ್ಲಿರುವುದು ಮಾದಿಗ ಸಮುದಾಯ. ಆ ನಿಟ್ಟಿನಲ್ಲಿ ಸಮುದಾಯವನ್ನು ವ್ಯವಸ್ಥಿತವಾಗಿ ಆರ್ಥಿಕ, ಶೈಕ್ಷಣಿಕ ಹಾಗು ಸಾಮಾಜಿಕವಾಗಿ ಮುನ್ನಲೆಗೆ ತರುವ ನಿಟ್ಟಿನಲ್ಲಿ ರಾಜ್ಯ ನಾಯಕರಾದ ಕೆ.ಹೆಚ್. ಮುನಿಯಪ್ಪ, ನಾರಾಯಣಸ್ವಾಮಿ, ಹೆಚ್.ಆಂಜನೇಯ, ಗೋವಿಂದ ಕಾರಜೋಳ ಮೊದಲಾದವರು ಪಕ್ಷಾತೀತವಾಗಿ ಮಾದರ ಮಹಾಸಭಾ ರಚಿಸಿದ್ದಾರೆಂದರು.




ಈ ಮೂಲಕ ಸಮುದಾಯ ಕಟ್ಟುವ ಕೆಲಸಕ್ಕೆ ಮುಂದಾಗಿದ್ದು, ಸಮುದಾಯದ ಬಂಧುಗಳು ಸದಸ್ಯತ್ವ ಪಡೆದು ಸಭಾವನ್ನು ಸದೃಢಗೊಳಿಸಬೇಕು. ಸದಸ್ಯತ್ವ ನೋಂದಣಿ ಸಂಪೂರ್ಣ ಆನ್‌ಲೈನ್ ಮೂಲಕ ನಡೆಯಲಿದ್ದು, ಆ ಮೂಲಕ

» ನಾಲ್ಕನೇ ಪುಟದಲ್ಲಿ

# ಅಕ್ರಮವಾಗಿ ಅಕ್ಕಿ ಸಾಗಿಸುತ್ತಿದ್ದ 2 ಲಾರಿ ವಶಕ್ಕೆ

## ಆಲೂರು ತಾಲ್ಲೂಕಿನಲ್ಲಿ ಪ್ರಕರಣ | ಪತ್ರಕರ್ತರ ಸೋಗಿನಲ್ಲಿ ಲಂಚ ಪಡೆದ ಆರೋಪ

• ಪ್ರಜೋದಯ ವರದಿ

**ಹಾಸನ:** ಅಕ್ರಮವಾಗಿ ಎರಡು ಲಾರಿಗಳಲ್ಲಿ ಸಾಗಿಸುತ್ತಿದ್ದ ಪಡಿತರ ಅಕ್ಕಿಯನ್ನು ಆಲೂರು ತಾಲ್ಲೂಕಿನ ಚೌಳಗೆರೆ ಟೋಲ್ ಗೇಟ್ ಸಮೀಪ ಭಾನುವಾರ ರಾತ್ರಿ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪಡಿತರ ಅಕ್ಕಿಗೆ ಪಾಮಾಯಿಲ್ ಪಾಲೀಶ್ ಬಳಸಿ ಮಂಗಳೂರಿಗೆ ಸಾಗಿಸಲಾಗುತ್ತಿತ್ತು ಎಂದು ಆರೋಪಿಸಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ಅಕ್ಕಿ ಅಕ್ರಮ ಸಾಗಾಟ ವರದಿಯಾಗುತ್ತಲೇ ಇದ್ದು, ಅವ್ಯವಹಾರಕ್ಕೆ ಕಡಿವಾಣ ಇಲ್ಲದಂತಾಗಿದೆ. ಕೆಎ52ಬಿ-6239 ಹಾಗು ಕೆಎ 20ಎಸಿ2623 ನಂಬರ್‌ನ ಲಾರಿಗಳಲ್ಲಿ ಹಾಸನದಿಂದ ಮಂಗಳೂರಿಗೆ ಅಕ್ಕಿ ತುಂಬಿಕೊಂಡು ಲಾರಿಗಳು ಹೊರಟಿದ್ದವು. ಖಚಿತ ಮಾಹಿತಿ ಮೇರೆಗೆ ಬೆನ್ನಟ್ಟಿ ಹಿಡಿದ ಪೊಲೀಸರು ಚಾಲಕರನ್ನು ವಿಚಾರಿಸಿ ಆಹಾರ ಇಲಾಖೆ ಉಪನಿರ್ದೇಶಕರಿಗೆ ಕರೆ ಮಾಡಿ ಮಾಹಿತಿ ನೀಡಿದ ಬಳಿಕ ಇಲಾಖೆ ನಿರೀಕ್ಷಕರು ಸ್ಥಳಕ್ಕೆ ಭೇಟಿ ನೀಡಿದರು.

**ತಲಾ 75 ಸಾವಿರ ರೂ. ಪಡೆದ ಆರೋಪ**

ಹಾಸನದಿಂದ ಅಕ್ರಮ ಅಕ್ಕಿ ಸಾಗಾಟವಾಗುತ್ತಿದೆ ಎಂದು ಪೊಲೀಸರಿಗೆ ಮಾಹಿತಿ ನೀಡಿದ ಇಬ್ಬರು ಪತ್ರಕರ್ತರ ಸೋಗಿನ ದಂಧೆ ಕೋರರು ಲಂಚ ಪಡೆದಿದ್ದರೆಂದು ಗೊತ್ತಾಗಿದೆ. 112 ಸಹಾಯವಾಣಿಗೆ ಕರೆ ಮಾಡಿ ಅಕ್ಕಿ ಸಾಗಾಟದ ಮಾಹಿತಿ ನೀಡಿದ್ದ ಅವರು ನಂತರ ಲಾರಿಗಳನ್ನು ಪೊಲೀಸ್ ಠಾಣೆಗೆ ಕರೆ ತರುವಾಗ ಲಾರಿಯಲ್ಲೇ ಕುಳಿತು ಚಾಲಕರೊಂದಿಗೆ ಮಾತನಾಡಿ, ನಮಗೆ ದುಡ್ಡು ಕೊಟ್ಟರೆ ಬಿಟ್ಟು ಕಳುಹಿಸುತ್ತೇವೆಂದು ತಲಾ 75 ಸಾವಿರ ರೂ.ಗಳನ್ನು ಮತ್ತೊಬ್ಬರ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಿಸಿಕೊಂಡು ಪೊಲೀಸ್ ಠಾಣೆಗೆ ಲಾರಿಗಳನ್ನು ಕರೆತರದೆ ಪುನ: ಮುಖ್ಯ ರಸ್ತೆಯಲ್ಲಿ ಕಳುಹಿಸಿಕೊಟ್ಟಿದ್ದಾರೆ ಎನ್ನಲಾಗಿದೆ.




### ಪತ್ರಕರ್ತರ ಸೋಗಿನಲ್ಲಿ ದಂಧೆ

ಅಕ್ಕಿ ಸಾಗಾಟದ ಲಾರಿಗಳನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿ ಪುನಃ ಲಂಚ ಪಡೆದು ಬಿಟ್ಟು ಕಳಿಸಿರುವ ಇಬ್ಬರು ಆಸಾಮಿಗಳು ತಮ್ಮನ್ನು ತಾವು ಪತ್ರಕರ್ತರೆಂದು ಹೇಳಿಕೊಂಡಿದ್ದಾರೆ. ವಾಸ್ತವವಾಗಿ ಆಲೂರು ತಾಲ್ಲೂಕಿನ ಕಾರ್ಯನಿರತ ಪತ್ರಕರ್ತರು ಅವರನ್ನು ಎಂದಿಗೂ ಒಪ್ಪುವುದಿಲ್ಲ. ಸರ್ಕಾರಿ ಕಚೇರಿಗಳಿಗೆ ತೆರಳಿ ಮಾಧ್ಯಮದವರೆಂದು ಹೇಳಿಕೊಂಡು ಧಮ್ಕಿ ಹಾಕುವುದನ್ನು ಮುಂದುವರಿಸಿಯೇ ಇದ್ದಾರೆ. ಅವರ ವಿರುದ್ಧ ಸಾಕಷ್ಟು ದೂರುಗಳು ಕೇಳಿಬಂದಿವೆ. ಇಂತಹವರಿಂದ ನೈಜ ಪತ್ರಕರ್ತರಿಗೂ ಕೆಟ್ಟ ಹೆಸರು ಬಂದಿದೆ.

ಠಾಣೆಗೆ ಬರಬೇಕಿದ್ದ ಲಾರಿಗಳು ಸಕಲೇಶಪುರ ರಸ್ತೆಯಲ್ಲಿ ಹೋಗುತ್ತಿದ್ದುದನ್ನು ಕಂಡ ಪೊಲೀಸರು ಪುನಃ ಬೆನ್ನಟ್ಟಿ ವಾಪಾಸ್ ಕರೆ ತಂದಿದ್ದಾರೆ. ಆಲೂರು ಠಾಣೆಯಲ್ಲಿ ಸೋಮವಾರ ಸಂಜೆವರೆಗೆ ಅಕ್ಕಿ ಮೂಟೆಗಳ ತೂಕ ಹಾಕುವ ಪ್ರಕಿಯೆ ನಡೆಯಿತು. ಪ್ರಕರಣವನ್ನು ಗಂಭೀರವಾಗಿ ಪರಿ ಗಣಿಸಿರುವ ಪೊಲೀಸರು ಎಲ್ಲಾ ಆಯಾಮದಿಂದಲೂ ತನಿಖೆ ನಡೆಸುತ್ತಿದ್ದಾರೆ.

**ಆಹಾರ ಇಲಾಖೆ ಹೊಣೆಯಾಗಿಸಬೇಡಿ**

ಅಕ್ರಮ ಅಕ್ಕಿ ಸಾಗಾಟವಾಗುತ್ತಿದೆ ಎಂಬ ಮಾತ್ರಕ್ಕೆ ಅದು ಅನ್ನ ಭಾಗ್ಯ ಅಕ್ಕಿ, ಆಹಾರ ಇಲಾಖೆಗೆ ಸೇರಿದ್ದು ಎಂದು ಷರಾ ಬರೆಯಬಾರದೆಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ಅರುಣ್ ಕುಮಾರ್ ಸಂಗಾವಿ ಅವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಸತಿ ನಿಲಯಗಳು ಸೇರಿ 6 ಇಲಾಖೆಗೆ ಅಕ್ಕಿ ಸರಬರಾಜು ಆಗುತ್ತದೆ. ಅಕ್ರಮವಾಗಿ ಸಾಗಾಟವಾಗುತ್ತಿರುವುದು ಯಾವ ಇಲಾಖೆಗೆ ಸೇರಿದ್ದು ಎಂಬುದರ ತನಿಖೆಯಾಗಬೇಕು. ಅಕ್ಕಿ ಕಂಡಾಕ್ಷಣ ಎಲ್ಲರೂ ನಮಗೆ ಕರೆ ಮಾಡುತ್ತಾರೆ. ನಾವು ಪರಿಶೀಲನೆ ಮಾಡಬೇಕಾಗುತ್ತದೆ. ಆಲೂರು ತಾಲ್ಲೂಕಿನ ಚೌಳಗೆರೆ ಟೋಲ್‌ಗೇಟ್ ಬಳಿ ವಶಪಡಿಸಿಕೊಂಡ ಅಕ್ಕಿ ಮೂಟೆಗಳು ಆಹಾರ ಇಲಾಖೆಗೆ ಸೇರಿದ್ದವು ಎಂಬುದನ್ನು ಈಗಲೇ ಹೇಳಲು ಸಾಧ್ಯವಿಲ್ಲ. 50 ಕೆ.ಜಿ. ಮೂಟೆಗಳನ್ನು ಮಾತ್ರ ನಾವು ಲೋಡ್ ಮಾಡುತ್ತೇವೆ. ಲಾರಿಗಳಲ್ಲಿ 20, 30 ಕೆ.ಜಿ.ಮೂಟೆಗಳು ಸಿಕ್ಕಿವೆ. ಅದರ ಬಗ್ಗೆ ಪೊಲೀಸ್ ತನಿಖೆಯಿಂದ ತಿಳಿದು ಬರಬೇಕಿದೆ ಎಂದರು.

## ಮಾಮೂಲಿ ಪಡೆದು ಪೊಲೀಸರಿಂದಲೇ ಸಹಕಾರ | ತಲೆ ಎತ್ತಿವೆ ಅನಧಿಕೃತ ಕ್ಲಬ್‌ಗಳು

# ಜಿಲ್ಲೆಯಲ್ಲಿ ಇಸ್ಪೀಟ್ ದಂಧೆ ಅವ್ಯಾಹತ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ಮಟ್ಕಾ, ಇಸ್ಪೀಟ್, ಆನ್‌ಲೈನ್ ರಮ್ಮಿ ದಂಧೆಗಳು ಮಿತಿ ಮೀರಿದ ಪರಿಣಾಮ ದಂಧೆಕೋರರು, ಬಡ, ಮಧ್ಯಮ ವರ್ಗದ ಜನರ ಬದುಕಿನ ಜೊತೆಗೆ ಚೆಲ್ಲಾಟವಾಡುತ್ತಿದ್ದಾರೆ.

ಅನಧಿಕೃತ ಕ್ಲಬ್‌ಗಳು, ಬಾರ್ ಆ್ಯಂಡ್ ರೆಸ್ಟೋರೆಂಟ್‌ಗಳಲ್ಲಿ ಇಸ್ಪೀಟ್ ದಂಧೆ ಜೋರಾಗಿ ನಡೆಯುತ್ತಿದೆ. ಪೊಲೀಸರೇ ಜೂಜುಕೋರರಿಗೆ ಸಹಕಾರ ನೀಡುತ್ತಿದ್ದಾರೆಂಬ ಗಂಭೀರ ಆರೋಪ ಕೂಡ ಜಿಲ್ಲಾದ್ಯಂತ ಕೇಳಿ ಬರುತ್ತಿದೆ. ಚನ್ನರಾಯಪಟ್ಟಣದಲ್ಲಿ ಅನಧಿಕೃತವಾಗಿ 6 ಕ್ಲಬ್‌ಗಳನ್ನು ನಡೆಸಲಾಗುತ್ತಿದೆ. ಇಲ್ಲಿ ಯಾರ ಭಯವೂ ಇಲ್ಲದೆ ಇಸ್ಪೀಟ್ ದಂಧೆ ನಡೆಯುತ್ತಿದೆ. ಇದಕ್ಕೆ ಸಹಕಾರ ನೀಡುತ್ತಿರುವ ಪೊಲೀಸರು ಪ್ರತಿ ತಿಂಗಳೂ ತಮ್ಮ ಪಾಲಿನ ಮಾಮೂಲಿ ಪಡೆದುಕೊಳ್ಳುತ್ತಿದ್ದಾರೆಂದು ಸ್ಥಳೀಯರೇ ಆರೋಪಿಸಿದ್ದಾರೆ.

ನುಗ್ಗೇಹಳ್ಳಿ, ಹಿರೀಸಾವೆ, ದಿಡಿಗ, ಹಾಸನ ನಗರದ ಹೊರವಲಯ, ಪೆನ್‌ಷನ್‌ಮೊಹಲ್ಲಾ ವ್ಯಾಪ್ತಿ, ರಿಂಗ್ ರೋಡ್‌ನಲ್ಲಿರುವ ಬಾರ್ ಆ್ಯಂಡ್ ರೆಸ್ಟೋರೆಂಟ್‌ಗಳಲ್ಲಿ, ಸಕಲೇಶಪುರ ಪಟ್ಟಣ, ಹಾನುಬಾಳು, ವಳಲಹಳ್ಳಿ, ಬಾಳುಪೇಟೆ, ಆಲೂರು, ಬೇಲೂರು ತಾಲ್ಲೂಕು ವ್ಯಾಪ್ತಿಯಲ್ಲಿ ಅನಧಿಕೃತ ಕ್ಲಬ್‌ಗಳಲ್ಲಿ ಜೂಜಾಟ ವ್ಯಾಪಕವಾಗಿ ನಡೆಯುತ್ತಿದೆ. ಮಲೆನಾಡು ಭಾಗದಲ್ಲಿರುವ ಕೆಲ ಹೋಂ ಸ್ಟೇ, ರೆಸಾರ್ಟ್‌ಗಳು ಇಸ್ಪೀಟ್ ಅಡ್ಡೆಗಳಾಗಿ ಮಾರ್ಪಾಡುಗೊಂಡಿವೆ.

ಜಿಲ್ಲೆಯಲ್ಲಿ ವ್ಯಾಪಕವಾಗಿ ಇಸ್ಪೀಟ್ ದಂಧೆ ನಡೆಯುತ್ತಿದೆ ಎಂಬುವುದಕ್ಕೆ ತಾಜಾ ಉದಾಹರಣೆ ಎಂಬಂತೆ ಡಿ.16ರಂದು ಪೊಲೀಸ್ ಉಪ ಅಧೀಕ್ಷಕ ಗಂಗಾಧರಪ್ಪ ಅವರ ನೇತೃತ್ವದ ತಂಡ ದಾಳಿ ನಡೆಸಿ, 17 ಆರೋಪಿಗಳನ್ನು ಬಂಧಿಸಿ ಪ್ರಕರಣ ದಾಖಲಿಸಿಕೊಂಡು, ಬಂಧಿತರಿಂದ 65 ಸಾವಿರ ರೂ., 2 ಬೈಕ್, 20 ಮೊಬೈಲ್, 2 ಆಟೋಗಳನ್ನು ವಶಪಡಿಸಿಕೊಂಡಿದ್ದರು.

ಇತ್ತೀಚೆಗಷ್ಟೇ ಪೆನ್‌ಷನ್ ಮೊಹಲ್ಲಾ ಠಾಣಾ ವ್ಯಾಪ್ತಿಯಲ್ಲಿ ಡಿಸಿಆರ್‌ಬಿ ಇನ್ಸ್‌ಪೆಕ್ಟರ್ ದಾಳಿ ನಡೆಸಿ 11 ಜನರನ್ನು ಬಂಧಿಸಿ, 19.99 ಲ.ರೂ., ಆಲೂರು ತಾಲ್ಲೂಕಿನ ಚಿನ್ನಹಳ್ಳಿಯಲ್ಲಿ ಜೂಜಾಡುತ್ತಿದ್ದ 10 ಜನರ ಮೇಲೆ ಪ್ರಕರಣ ದಾಖಲಾಗಿತ್ತು. ಸಕಲೇಶಪುರ ದಲ್ಲೂ ಹಲವರ ಮೇಲೆ ಪ್ರಕರಣ ದಾಖಲಿಸಿ, 20ಕ್ಕೂ ಹೆಚ್ಚು ವಾಹನಗಳನ್ನು ವಶಪಡಿಸಿ ಕೊಳ್ಳಲಾಗಿತ್ತು.

ಒಂದೆಡೆ ಪೊಲೀಸರೇ ಜೂಜು ಅಡ್ಡೆಗಳ ಮೇಲೆ ದಾಳಿ ನಡೆಸಿ ಆರೋಪಿಗಳನ್ನು ಬಂಧಿಸಿ ಪ್ರಕರಣ ದಾಖಲಿಸುತ್ತಿದ್ದಾರೆ. ಅದೇ ಪೊಲೀಸರು ಮತ್ತೊಂದೆಡೆ ಅನಧಿಕೃತ ಕ್ಲಬ್‌ಗಳಲ್ಲಿ ಮಟ್ಕಾ, ಜೂಜಾಟ ಆಡಲು ಮಾಮೂಲಿ ಪಡೆದು ಸಹಕಾರ ನೀಡುತ್ತಿದ್ದಾರೆ. ಪೊಲೀಸರ ಈ ಇಬ್ಬಗೆ ನೀತಿ ಸ್ಥಳೀಯರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

**ಕ್ರಮ ಕೈಗೊಳ್ಳದ ಪೊಲೀಸ್ ಇಲಾಖೆ**

ಕೆಲವರು ಜೂಜಾಟದ ವ್ಯಾಮೋಹಕ್ಕೆ ಸಿಕ್ಕಿ ಸರ್ವಸ್ವವನ್ನು ಕಳೆದುಕೊಂಡು ಸಾಲದ ಸುಳಿಯಲ್ಲಿ ಸಿಲುಕಿ ಬಲಿಯಾಗುತ್ತಿದ್ದಾರೆ. ಆದರೆ, ಪೊಲೀಸ್ ಇಲಾಖೆ ಇದನ್ನು ಮಟ್ಟ ಹಾಕುವಲ್ಲಿ ವಿಫಲವಾಗುತ್ತಿದೆ. ಪೊಲೀಸರೆ ಮಾಮೂಲಿ ಪಡೆದು ಜೂಜು ದಂಧೆಗಳಿಗೆ ಸಹಕಾರ ಕೊಡುತ್ತಿರುವುದು ಸಾರ್ವಜನಿಕ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

ಪೊಲೀಸ್ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ, ಸಿಬ್ಬಂದಿ ತಮ್ಮ ತಮ್ಮ ಠಾಣಾ ಬೀಟ್ ವ್ಯಾಪ್ತಿಯಲ್ಲಿ ಗುಪ್ತ ಮಾಹಿತಿಯನ್ನು ಸಂಗ್ರಹಿಸಿ ಯಾರಾದರೂ ಬೆಟ್ಟಿಂಗ್ ದಂಧೆ ನಡೆಸುವವರು ಇದ್ದಲ್ಲಿ ಮಾಹಿತಿಯನ್ನು ಮೇಲಾಧಿಕಾರಿಗಳ ಗಮನಕ್ಕೆ ತರಲು ಸೂಚಿಸಲಾಗಿದೆ. ಆದರೆ, ಆ ಕೆಲಸವನ್ನೂ ಯಾರೊಬ್ಬರು ಮಾಡದಿರುವುದು ದಂಧೆ ವ್ಯಾಪಕವಾಗಿ ಹರಡಲು ಪ್ರಮುಖ ಕಾರಣವಾಗಿದೆ.

ಠಾಣಾಧಿಕಾರಿಗಳಿಗೆ ಹಾಗು ಉಪ ವಿಭಾಗಾಧಿಕಾರಿಗಳಿಗೆ ಗುಪ್ತ ಮಾಹಿತಿ ಕರ್ತವ್ಯ ಮತ್ತು ಅಪರಾಧ ಕರ್ತವ್ಯ ನಿರ್ವಹಿಸುವ ಸಿಬ್ಬಂದಿ ದಂಧೆ ನಡೆಸುವವರ ನಿಖರವಾದ ಮಾಹಿತಿ ಇದ್ದರೂ ದಾಳಿ ನಡೆಸಿ ಸೂಕ್ತ ಕಾನೂನು ಕ್ರಮ ಜರುಗಿಸಲು ನಿರ್ಲಕ್ಷ್ಯ ಧೋರಣೆ ತೋರಲಾಗುತ್ತಿದೆ ಎಂಬ ದೂರುಗಳು ಕೇಳಿಬರುತ್ತಿವೆ.



### ರಿಕ್ರಿಯೇಷನ್ ಹೆಸರಿನಲ್ಲಿ ದಂಧೆ

ರಿಕ್ರಿಯೇಷನ್ ಕ್ಲಬ್‌ಗಳ ಹೆಸರಿನಲ್ಲಿ ಅನುಮತಿ ನೀಡಿ ಇಸ್ಪೀಟ್ ಆಡಲು ಅವಕಾಶ ಕಲ್ಪಿಸಿಕೊಡುತ್ತಿದ್ದಾರೆಂಬ ಆರೋಪಗಳು ಕೇಳಿ ಬರುತ್ತಿವೆ. ಆದರೆ, ಇದರ ವಿರುದ್ಧ ದೂರುಗಳು ಬಂದರೂ ಕ್ರಮ ಕೈಗೊಳ್ಳಲಾಗುತ್ತಿಲ್ಲವೆಂಬ ದೂರುಗಳಿವೆ.

ರಿಕ್ರಿಯೇಷನ್ ಕ್ಲಬ್‌ಗಳ ಹೆಸರಿನಲ್ಲಿ ಅನುಮತಿ ಪಡೆದರೆ ಸಾಂಸ್ಕೃತಿಕ ಕಾರ್ಯಕ್ರಮ, ಚೆಸ್, ಕೇರಂ ಇತರೆ ಮನರಂಜನಾತ್ಮಕ ಚಟುವಟಿಕೆಗಳನ್ನು ನಡೆಸಬೇಕು. ಆದರೆ, ಈ ಕ್ಲಬ್‌ಗಳಲ್ಲಿ ಅಂತಹ ಯಾವುದೇ ಚಟುವಟಿಕೆಗಳನ್ನು ನಡೆಸದೆ ಟೇಬಲ್ ಲೆಕ್ಕದಲ್ಲಿ ಇಸ್ಪೀಟ್ ದಂಧೆ ನಡೆಸಲಾಗುತ್ತಿದೆ.

# ದ್ವೇಷ ಭಾಷಣ ವಿಧೇಯಕ ತಡೆಗೆ ಒತ್ತಾಯ

## ಹಿಂದೂ ಜನಜಾಗೃತಿ ಸಮಿತಿ, ವಿವಿಧ ಹಿಂದೂ ಸಂಘಟನೆಗಳಿಂದ ರಾಜ್ಯಪಾಲರಿಗೆ ಮನವಿ

• ಪ್ರಜೋದಯ ವರದಿ

**ಬೆಂಗಳೂರು:** ಕರ್ನಾಟಕ ವಿಧಾನ ಸಭೆಯಲ್ಲಿ ಅಂಗೀಕೃತಗೊಂಡಿರುವ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ತಡೆ) ವಿಧೇಯಕಕ್ಕೆ ರಾಜ್ಯಪಾಲರು ಅನುಮೋದನೆ ನೀಡಬಾರದು ಎಂದು ಒತ್ತಾಯಿಸಿ ಹಿಂದೂ ಜನಜಾಗೃತಿ ಸಮಿತಿ, ವಿವಿಧ ಹಿಂದೂ ಸಂಘಟನೆಗಳು ಹಾಗೂ ಹಿರಿಯ ವಕೀಲರೊಂದಿಗೆ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಲಾಗಿದೆ.

ಮನವಿಯಲ್ಲಿ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ತಡೆ ವಿಧೇಯಕವು ಸ್ಪಷ್ಟತೆಯಿಲ್ಲದ ಹಾಗೂ ಸಂವಿಧಾನಕ್ಕೆ ವಿರುದ್ಧವಾದ ಕಾನೂನಾಗಿದ್ದು, ಜನರ ಮಾತಿನ ಸ್ವಾತಂತ್ರ್ಯ ಮತ್ತು ಧಾರ್ಮಿಕ ಆಚರಣೆಗಳಿಗೆ ದೊಡ್ಡ ಅಪಾಯವಾಗುತ್ತದೆ ಎಂದು ತಿಳಿಸಲಾಗಿದೆ. ''ದ್ವೇಷ ಭಾಷಣ'' ಮತ್ತು ''ದ್ವೇಷ ಅಪರಾಧ''ಗಳಂತಹ ಪದಗಳಿಗೆ ಸರಿಯಾದ ಅರ್ಥ ನೀಡದೆ ಇರುವುದರಿಂದ, ಯಾವುದೇ ಹಿಂಸೆ ಅಥವಾ ತಪ್ಪು ಉದ್ದೇಶವಿಲ್ಲದ ಮಾತುಗಳನ್ನೂ ಅಪರಾಧವೆಂದು ಪರಿಗಣಿಸುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

ಆರೋಪಿಗಳೇ ತಮ್ಮ ಮಾತು ಧಾರ್ಮಿಕ ಉದ್ದೇಶದಿಂದ ಅಥವಾ ಸಾರ್ವಜನಿಕ ಹಿತಕ್ಕಾಗಿ ಮಾಡಿದ್ದು ಎಂದು ಸಾಬೀತುಪಡಿಸಬೇಕೆಂದು ಹೇಳಿರುವುದು ನ್ಯಾಯತತ್ತ್ವಕ್ಕೆ ವಿರುದ್ಧವಾಗಿದೆ. ಇದರಿಂದ ವೇದಶಾಸ್ತ್ರ ಉಲ್ಲೇಖ, ಧರ್ಮಪ್ರಚಾರ, ಧಾರ್ಮಿಕ ಚರ್ಚೆಗಳು ಮತ್ತು ಮತೀಯವಾದದ ಟೀಕೆಗಳಂತಹ ಸಾಮಾನ್ಯ ಧಾರ್ಮಿಕ ಚಟುವಟಿಕೆಗಳೇ ಸಮಸ್ಯೆಗೆ ಒಳಗಾಗುವ ಭೀತಿ ಇದೆ. ಮಾತು ಸಂಬಂಧಿತ ಪ್ರಕರಣಗಳನ್ನು ಸಂಜ್ಞೆಯ ಮತ್ತು ಜಾಮೀನು ರಹಿತವಾಗಿಸಿರುವುದು ತಕ್ಷಣದ ಬಂಧನ, ಸಾಧ ುಸಂತರ,



ಸಾಮಾಜಿಕ ಕಾರ್ಯಕರ್ತರು ಹಾಗೂ ಪತ್ರಕರ್ತರ ಕಿರುಕುಳಕ್ಕೆ ಕಾರಣವಾಗಬಹುದು. ಅಲ್ಲದೆ, ನ್ಯಾಯಾಲಯದ ಮೇಲ್ವಿಚಾರಣೆಯಿಲ್ಲದೆ ಅಧಿಕಾರಿಗಳಿಗೆ ಹೆಚ್ಚಿನ ಅಧಿಕಾರ ನೀಡಿರುವುದು ಮತ್ತು ಈಗಾಗಲೇ ಇರುವ ಕೇಂದ್ರ ಕಾನೂನುಗಳೊಂದಿಗೆ ಈ ವಿಧೇಯಕ ಸಂಘರ್ಷ ಉಂಟುಮಾಡುವ ಸಾಧ್ಯತೆ ಇರುವುದರಿಂದ, ಇದು ಸಂವಿಧಾನಾತ್ಮಕವಾಗಿ ಪ್ರಶ್ನೆಗೆ ಒಳಪಡುತ್ತದೆ ಎಂದು ತಿಳಿಸಿದೆ.

ಹಿಂದೂ ಜನಜಾಗೃತಿ ಸಮಿತಿಯು ಮಾನ್ಯ ರಾಜ್ಯಪಾಲರನ್ನು ಸಂವಿಧಾನದ ವಿಧಿ 200ರ ಅಡಿಯಲ್ಲಿ ಈ ವಿಧೇಯಕಕ್ಕೆ ಅನುಮೋದನೆ ನೀಡದೇ ತಡೆ ಹಿಡಿಯುವಂತೆ ಮನವಿ ಮಾಡಿದೆ. ಜೊತೆಗೆ, ವಿಧೇಯಕದಲ್ಲಿರುವ ಅಸ್ಪಷ್ಟ ಅಂಶಗಳಿಗೆ ಸ್ಪಷ್ಟ ವ್ಯಾಖ್ಯಾನಗಳನ್ನು ನೀಡುವುದು, ಜನರ ವಾಕ್ ಸ್ವಾತಂತ್ರ್ಯ ಹಾಗೂ ಧಾರ್ಮಿಕ ಸ್ವಾತಂತ್ರ್ಯಕ್ಕೆ ಪೂರ್ಣ ರಕ್ಷಣೆ ಒದಗಿಸುವುದು ಮತ್ತು ನ್ಯಾಯಾಲಯದ ಮೇಲ್ವಿಚಾರಣೆಯೊಂದಿಗೆ ಮರುಪರಿಶೀಲನೆ ನಡೆಸುವ ಉದ್ದೇಶದಿಂದ ಇದನ್ನು ವಿಧಾನಸಭೆಗೆ ಹಿಂದಿರುಗಿಸುವಂತೆ ಕೇಳಲಾಗಿದೆ. ಸಂವಿಧಾನದ ರಕ್ಷಕರಾದ ಮಾನ್ಯ ರಾಜ್ಯಪಾಲರು ಮೂಲಭೂತ ಹಕ್ಕುಗಳು ಮತ್ತು ಪ್ರಜಾಪ್ರಭುತ್ವದ ಸಮತೋಲನವನ್ನು ಕಾಪಾಡುವಂತಹ ನ್ಯಾಯಯುತ ನಿರ್ಣಯ ಕೈಗೊಳ್ಳುತ್ತಾರೆ ಎಂಬ ವಿಶ್ವಾಸವನ್ನು ಸಮಿತಿ ವ್ಯಕ್ತಪಡಿಸಿದೆ.

ಈ ಸಂದರ್ಭದಲ್ಲಿ ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ವಕ್ತಾರ ಮೋಹನ್‌ಗೌಡ, ವಿಶ್ವ ಹಿಂದೂ ಪರಿಷತ್‌ನ ರಾಷ್ಟ್ರೀಯ ಕೋಷಾಧ್ಯಕ್ಷ ದೀಪಕ್ ರಾಜಗೋಪಾಲ, ಶ್ರೀರಾಮ ಸೇನೆಯ ಸುಂದ್ರೇಶ್ ನರ್ಗಲ್, ಅಯ್ಯಪ್ಪ ಸೇವಾ ಸಮಾಜಮ್ ಅಧ್ಯಕ್ಷ ಎನ್ ಜಯರಾಮ್, ರಾಷ್ಟ್ರ ರಕ್ಷಣಾ ಪಡೆಯ ಪುನೀತ್ ಕೆರೆಹಳ್ಳಿ, ಹಿಂದೂ ಮುಖಂಡರಾದ ಎಮ್.ಎಲ್. ಶಿವಕುಮಾರ, ವಕೀಲ ಉಮಾಶಂಕರ ಮೇಗುಂಡಿ ಉಪಸ್ಥಿತರಿದ್ದರು.

# ಸರಣಿ ಕಳ್ಳತನ: ಅಂಗಡಿ, ಕ್ಯಾಂಟೀನ್‌ಗೆ ಮೂರು ಬಾರಿ ಕನ್ನ- ಜನರಲ್ಲಿ ಆತಂಕ

• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನ ಬಾಗೆ ಗ್ರಾಮದಲ್ಲಿ ದಿನಸಿ ಅಂಗಡಿಗಳು ಹಾಗು ಕ್ಯಾಂಟೀನ್‌ನಲ್ಲಿ ಭಾನುವಾರ ರಾತ್ರಿ ಸರಣಿ ಕಳ್ಳತನ ನಡೆಸಿದೆ. ಸತತವಾಗಿ ಮೂರನೇ ಬಾರಿಗೆ ಕಳ್ಳತನ ನಡೆಯುತ್ತಿರುವುದರಿಂದ ವ್ಯಾಪಾರಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಬಾಗೆ ಸಮೀಪದ ಆಲುವಳ್ಳಿ ಗ್ರಾಮ ಅಶೋಕ್ ಸ್ಟೋರ್ ದಿನಸಿ ಅಂಗಡಿಗೆ ಭಾನುವಾರ ರಾತ್ರಿ 3ನೇ ಬಾರಿಗೆ ಕನ್ನ ಹಾಕಾಗಿದೆ. ಅಶೋಕ್ ಎಂಬುವರಿಗೆ ಸೇರಿದ ಅಂಗಡಿಗೆ ನುಗ್ಗಿದ ಕಳ್ಳರು ಸುಮಾರು 65,000 ರೂ. ಮೌಲ್ಯದ ದಿನಸಿ ಪದಾರ್ಥಗಳನ್ನು ಕಳವು ಮಾಡಿದ್ದಾರೆ.

ಮೊದಲ ಬಾರಿ ಕಳ್ಳತನ ನಡೆದಿದ್ದ ವೇಳೆ ಹಣ ಕದ್ದು ಪರಾರಿಯಾಗಿದ್ದರು. ಎರಡನೇ ಬಾರಿ ಸುಮಾರು 1,50,000 ರೂಪಾಯಿಗಳ ದಿನಸಿ ಸಾಮಾನುಗಳನ್ನು ಕದ್ದಿದ್ದರು. ಭಾನುವಾರ ರಾತ್ರಿ ಮೂರನೇ ಬಾರಿ ಅಂಗಡಿಯ ಹಿಂಬಾಗಿಲನ್ನು ಮುರಿದು ಕಳ್ಳತನ ಮಾಡಿರುವುದು ಬೆಳಕಿಗೆ ಬಂದಿದೆ. ಸ್ವಲ್ಪ ದೂರದ ಅಂತರದಲ್ಲೇ ಇರುವ ಮೋಹನ್ ಎಂಬುವರಿಗೆ ಸೇರಿದ ಅಂಗಡಿಯ ಬಾಗಿಲ ಬೀಗವನ್ನು ಮುರಿದು ಕಳ್ಳತನಕ್ಕೆ ಯತ್ನಿಸಿದ್ದಾರೆ. ಕಳ್ಳತನ ದೃಶ್ಯ ಸಿಸಿ ಕ್ಯಾಮಾರದಲ್ಲಿ ಸೆರೆಯಾಗಿದೆ.

ಅದೇ ರೀತಿ ಬಾಗೆ ಗ್ರಾಮದ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿರುವ ಇಂದಿರಾ ಕ್ಯಾಂಟೀನ್‌ಗೂ 3ನೇ ಬಾರಿಗೆ ಕನ್ನ ಹಾಕಲಾಗಿದೆ. ಮೊದಲ ಬಾರಿ 4000 ಚಿಲ್ಲರೆ ನಾಣ್ಯ, 3 ಸಾವಿರ ಮೌಲ್ಯದಷ್ಟು ವಸ್ತುಗಳು ಕಳ್ಳತನ ಮಾಡಿದ್ದರು.

ಎರಡನೇ ಬಾರಿಯೂ ಐದು ಸಾವಿರ ರೂಪಾಯಿ ಮೌಲ್ಯದ ಬೀಡಿ, ಸಿಗರೇಟು, ಕೇಕ್ ಮುಂತಾದ ವಸ್ತುಗಳನ್ನು ಕಳವು ಮಾಡಿದ್ದರು. ಇದಾದ ಕೆಲವೇ ದಿನಗಳಲ್ಲಿ 3ನೇ ಬಾರಿಗೆ ಭಾನುವಾರ ರಾತ್ರಿ ಕ್ಯಾಂಟೀನ್ ಬಾಗಿಲು ಮುರಿದು ಒಳ ನುಗ್ಗಿದ ಕಳ್ಳರು, ಎಲ್ಲಾ ಕಡೆ ಹುಡುದರೂ ಹಣ ಅಥವಾ ಬೆಲೆ ಬಾಳುವ ಯಾವುದೇ ವಸ್ತು ಸಿಗದೆ ಇದ್ದರಿಂದ ವಾಪಾಸ್ಸಾಗಿದ್ದಾರೆ. ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾದ ಹಿನ್ನಲೆ ಪೊಲೀಸರು ಪರಿಶೀಲನೆ ನಡೆಸಿ, ಕಳ್ಳರ ಬಂಧನಕ್ಕೆ ಬಲೆ ಬೀಸಿದ್ದಾರೆ.

ಸರಣಿ ಕಳ್ಳತನ, ಪದೇ ಪದೇ ಅಂಗಡಿಗಳಿಗೆ ಕನ್ನ ಹಾಕುತ್ತಿರುವುದರಿಂದ ಕ್ಯಾಂಟೀನ್, ದಿನಸಿ ಅಂಗಡಿಗಳಲ್ಲಿ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿರುವ ಬಡ ವ್ಯಾಪಾರಿಗಳಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಈ ಪ್ರಕರಣವನ್ನು ಪೊಲೀಸರು ಗಂಭೀರವಾಗಿ ಪರಿಹಣಿಸಿ ಆರೋಪಿಗಳನ್ನು ಬಂಧಿಸಬೇಕೆಂದು ವ್ಯಾಪಾರಿಗಳು ಒತ್ತಾಯಿಸಿದ್ದಾರೆ.

# ಜ.11 ರಂದು ಅಂತರ ಜಿಲ್ಲಾ ಕ್ರೀಡಾಕೂಟ

• ಪ್ರಜೋದಯ ವರದಿ

**ಸಕಲೇಶಪುರ:** ಅಂತರ ಜಿಲ್ಲಾ ಕ್ರೀಡಾಕೂಟವನ್ನು ಜನವರಿ 11 ರಂದು ಆಯೋಜಿಸಲಾಗುತ್ತಿದೆ ಎಂದು ಶ್ರೀ ಕುಮಾರಲಿಂಗೇಶ್ವರ ಸ್ವಾಮಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ಹುದಿನೂರು ಮಲ್ಲೇಶ್ ಅವರು ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಕುಮಾರಲಿಂಗೇಶ್ವರ ಸ್ವಾಮಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸಮಿತಿ (ರಿ.) ವನಗೂರು ಕೂಡುರಸ್ತೆ, ಇವರ ವತಿಯಿಂದ ಶ್ರೀ ಕುಮಾರಲಿಂಗೇಶ್ವರ ಸ್ವಾಮಿ 1,000 ಜಾತ್ರಾ ಮಹೋತ್ಸವದ ಅಂಗವಾಗಿ ಕ್ರೀಡಾಕೂಟವು ಜನವರಿ 11 ರಂದು ಬೆಳಿಗ್ಗೆ 9 ಗಂಟೆಯಿಂದ ವನಗೂರು- ಕೂಡುರಸ್ತೆಯಲ್ಲಿರುವ ಶ್ರೀ ಕುಮಾರಲಿಂಗೇಶ್ವರ ವಿದ್ಯಾ ಸಂಸ್ಥೆಯ ಆಟದ



ಮೈದಾನದಲ್ಲಿ ಕ್ರೀಡಾಕೂಟ ನಡೆಯಲಿದೆ. ಕಳೆದ 9 ವರ್ಷಗಳಿಂದ ಪುರುಷರು ಮತ್ತು ಮಹಿಳೆಯರ ಕಬಡ್ಡಿ ಪಂದ್ಯಾವಳಿಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿದ್ದು, ಈ ಬಾರಿ ಗ್ರಾಮಸ್ಥರ ಒತ್ತಾಯದ ಮೇರೆಗೆ ಮಹಿಳೆಯರ ಥ್ರೋಬಾಲ್ ಪಂದ್ಯಾವಳಿಯನ್ನೂ ಆಯೋಜಿಸಲಾಗಿದೆ ಎಂದು ತಿಳಿಸಿದರು.

**ಪ್ರವೇಶ ಶುಲ್ಕ:** ಪುರುಷರು ಹಾಗೂ ಮಹಿಳೆಯರ ಕ್ರೀಡೆಗಳಿಗೆ ರೂ.1,000 ನಿಗದಿಪಡಿಸಲಾಗಿದ್ದು, ಪುರುಷರ ಕಬಡ್ಡಿ ಅಂತಿಮ ವಿಜೇತರಿಗೆ ಪ್ರಥಮ ರೂ.30,000, ದ್ವಿತೀಯ ರೂ.20,000, ತೃತೀಯ ರೂ.10,000, ಚತುರ್ಥ ರೂ.5,000, ಮಹಿಳೆಯರ ಕಬಡ್ಡಿ ವಿಜೇತರಿಗೆ ಪ್ರಥಮ ರೂ.20,000, ದ್ವಿತೀಯ ರೂ.10,000 ಹಾಗೂ ಮಹಿಳೆಯರ ಥ್ರೋಬಾಲ್ ವಿಜೇತರಿಗೆ ಪ್ರಥಮ ರೂ.20,000, ದ್ವಿತೀಯ ರೂ.10,000 ಮತ್ತು ಟ್ರೋಫಿ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.

ವನಗೂರು ಗ್ರಾಪಂ ಮಾಜಿ ಅಧ್ಯಕ್ಷ ಆನಂದ್, ಬಸವರಾಜು, ಖಜಾಂಚಿ ಸುಬ್ರಮಣ್ಯ ಹಾಜರಿದ್ದರು.

# ಕನ್ನಡ ನಾಡಿಗೆ ಸುಗಮ ಸಂಗೀತದ ಕೊಡುಗೆ ಅನನ್ಯ

• ಪ್ರಜೋದಯ ವರದಿ

**ಹಾಸನ:** ಕನ್ನಡ ನಾಡು, ನುಡಿ ಗಟ್ಟಿಯಾಗಲು ಸುಗಮ ಸಂಗೀತದ ಕೊಡುಗೆ ಅನನ್ಯವಾಗಿದೆ ಎಂದು ಅಂತಾರಾಷ್ಟ್ರೀಯ ಸುಗಮ ಸಂಗೀತ ಗಾಯಕ ಡಾ.ಕಿಕ್ಕೇರಿ ಕೃಷ್ಣಮೂರ್ತಿ ತಿಳಿಸಿದರು.

ನಗರದ ಟೈಮ್ಸ್ ಗುರುಕುಲ ಕಾಲೇಜಿನಲ್ಲಿ ಆದರ್ಶ ಸುಗಮ ಸಂಗೀತ ಅಕಾಡೆಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಕಲಾ ಸಂಘ ಆಶ್ರಯದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ನಾಡಗೀತೆ, ಸುಗಮ ಸಂಗೀತ ಶತಮಾನೋತ್ಸವ ಗೀತಯಾನ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಕನ್ನಡ ಗೀತೆಗಳ ತರಬೇತಿ ನೀಡಿ ಮಾತನಾಡಿದ ಅವರು, ಕನ್ನಡ ನಾಡಿನ ಸಿರಿವಂತಿಕೆ ಬಲುದೊಡ್ಡ



ದಾಗಿದೆ. ಇಂತಹ ನಾಡಲ್ಲಿ ಭಾಷೆ, ಗೀತೆಗಳ ಮೂಲಕ ಅನ್ಯಭಾಷಿಕರಲ್ಲಿಯೂ ಕನ್ನಡಾಭಿಮಾನ ಮೂಡಿಸುವುದು ಎಲ್ಲರ ಕರ್ತವ್ಯ. ಕನ್ನಡದ ಕಂಪು, ನಾಡು, ನುಡಿಗೆ ಭವಿಷ್ಯದ ಮಕ್ಕಳ ಕಾಣಿಕೆ ಬಲುದೊಡ್ಡದಾಗಿದೆ. ಮಕ್ಕಳು ನಾಡಿನ ಆಸ್ತಿಯಾಗಿದ್ದು, ನಾಡಗೀತೆ, ಕನ್ನಡ ಗೀತೆಗಳು ಮಕ್ಕಳ ಮನದಲ್ಲಿ ಉಳಿದರೆ ಮಾತ್ರ ಸುಂದರ ನಮ್ಮ ಭಾಷೆ ಗಟ್ಟಿಯಾಗಲಿದೆ ಎಂದು ಶ್ಲಾಘಿಸಿದರು.

ಸಂಗೀತಕ್ಕೆ ಅನ್ಯಭಾಷಿಕರನ್ನು ಸೆಳೆಯುವ ಶಕ್ತಿ ಇದೆ. ಕನ್ನಡ ಭಾಷೆಯೇ ಸುಂದರ ಸಂಗೀತವಾಗಿದೆ. ಇದರ ಮಾಧುರ್ಯ ಅರಿತು ಇಡೀ ರಾಜ್ಯದಲ್ಲಿನ ಮಕ್ಕಳಲ್ಲಿ ಕನ್ನಡಾಭಿಮಾನ ಮೂಡಲು ಉಚಿತವಾಗಿ ಈ ಸುಗಮ ಸಂಗೀತದ ಅಭಿಯಾನ ಆರಂಭಿಸಲಾಗಿದೆ. ಡಿಸೆಂಬರ್ ಮಾಹೆಯಲ್ಲಿ ರಾಷ್ಟ್ರಕವಿ ಕುವೆಂಪು, ಗಾನಗಾರುಡಿಗ ಸಿ.ಎಸ್.ಅಶ್ವಥ್ ಜನ್ಮದಿನವಿದ್ದು ಅವರ ನೆನಪಿನಲ್ಲಿ ಗೀತೆಯ ಪಯಣ ಆರಂಭಿಸಲಾಗಿದೆ. ನಾಡಿನ ಶ್ರೇಷ್ಠ ಕವಿ, ಸಾಹಿತಿ, ವಚನ, ದಾಸ ಸಾಹಿತ್ಯದ ಪರಿಚಯವಾದಲ್ಲಿ ಬಹುಕಾಲ ಕನ್ನಡದ ಮನಸ್ಸು ವಿಶ್ವಮಟ್ಟದಲ್ಲಿ ಕನ್ನಡದ ಕಂಪು ಸೌಂದರ್ಯ ಕಂಗೊಳಿಸಲಿದೆ ಎಂದು ನುಡಿದರು.

ಕಾರ್ಯನಿರತ ಪತ್ರಕರ್ತ ಸಂಘದ ರಾಜ್ಯ ಉಪಾಧ್ಯಕ್ಷ ಮದನಗೌಡ ಮಾತನಾಡಿ, ಕನ್ನಡ ಭಾಷೆ ಮಕ್ಕಳ ನಾಲಿಗೆಯಲ್ಲಿ ನಲಿಯಲು ಸುಗಮ ಸಂಗೀತದ ಕೊಡುಗೆ ದೊಡ್ಡದಾಗಿದೆ. ಕನ್ನಡದ ತೇರು ಸುಗುಮವಾಗಿ ಎಳೆಯಲು ಗಾಯಕ ಕಿಕ್ಕೇರಿ ಹಮ್ಮಿಕೊಂಡಿರುವ ಅಭಿಯಾನ ಕನ್ನಡದ ಅಸ್ಮಿತೆ ಉಳಿಯಲು ಸಹಕಾರಿಯಾಗಿದೆ. ಬೇಸರ ಕಳೆಯಲು ಮೊಬೈಲ್ ಬಿಡಿ, ಕನ್ನಡ ಗೀತೆಯನ್ನು ಗುನುಗಿ ಸಾಕು, ಮನಸ್ಸು ಕೋಮಲವಾಗಲಿದೆ ಎಂದು ಹಿತನುಡಿದರು.

ಕಸಾಪ ಜಿಲ್ಲಾಧ್ಯಕ್ಷ ಎಚ್.ಎಲ್. ಮಲ್ಲೇಶಗೌಡ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಕಸಾಪ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಅವರು ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷ ಎ ಬಿ ಸುರೇಂದ್ರ ಕುಮಾರ್, ಕಾಲೇಜಿನ ಪ್ರಾಂಶುಪಾಲೆ ಶೈಲಾ ರೈ, ಸ್ಪಂದನಾ ಫೌಂಡೇಷನ್ ಟ್ರಸ್ಟಿ ಕೆ.ವಿ.ಬಲರಾಮು, ಕಾಲೇಜು ಸಿಬ್ಬಂದಿ ಮತ್ತಿತರರಿದ್ದರು.

# ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಆರ್ಥಿಕ ಶಕ್ತಿ

• ಪ್ರಜೋದಯ ವರದಿ

**ಹಾಸನ:** ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬುವ ಜೊತೆಗೆ ವ್ಯಕ್ತಿತ್ವ ವಿಕಸನಕ್ಕೆ ಕೂಡ ಸಹಕಾರಿಯಾಗಿದೆ ಎಂದು ಧಾರ್ಮಿಕ ದತ್ತಿ ಇಲಾಖೆ ತಹಶೀಲ್ದಾರ್ ಎಂ.ಎಚ್.ಲತಾ ಅವರು ತಿಳಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ವತಿಯಿಂದ ನಗರದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಸೋಮವಾರ ಜ್ಞಾನ ವಿಕಾಸ ಕಾರ್ಯಕ್ರಮದ ಅಡಿಯಲ್ಲಿ ನಡೆದ ತಾಲ್ಲೂಕು ಮಟ್ಟದ ಮಹಿಳಾ ವಿಚಾರ ಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರು ಸ್ವಾವಲಂಬಿಯಾಗಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಪೂರಕ ಶಕ್ತಿ ನೀಡುತ್ತಿದೆ. ಸ್ವಸಹಾಯ ಸಂಘಗಳ ಸ್ಥಾಪನೆ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾಮಾಜಿಕ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಿ ಆ ಮೂಲಕ ಮಹಿಳೆಯರ ಬದುಕು ಹಸನಾಗಿಸುವ ಸಲುವಾಗಿ ಹತ್ತು ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದರು.

ದೇವಾಲಯಗಳ ಅಭಿವೃದ್ಧಿ, ಕೆರೆ ಅಭಿವೃದ್ಧಿ, ಮೂಲಕ ಸರ್ಕಾರದ ಜೊತೆಗೆ ಸಂಘಗಳನ್ನು ಸ್ಥಾಪಿಸಿಕೊಂಡು ತನ್ನದೇ ಆದ ಜನಪರ ಕಾರ್ಯಕ್ರಮಗಳನ್ನು ಮಾಡಿ ಅಪಾರ ಜನಮನ್ನಣೆ ಗಳಿಸಿದೆ. ಇಂತಹ ಸಂಜಮುಖಿ ಕೆಲಸಗಳು ಇನ್ನಷ್ಟು ಹೆಚ್ಚಾಗಲಿ ಎಂದು ಅವರು ಶುಭ ಹಾರೈಸಿದರು.

ಶಿವ್ಯ ಹಾಸ್ಪಿಟಲ್‌ನ ಸ್ತ್ರೀರೋಗ ತಜ್ಞೆ ಡಾ.ಭವ್ಯ ಮಾತನಾಡಿ, ಮಹಿಳೆಯ



ರಲ್ಲಿ ಹೆಚ್ಚಾಗಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವುದರಿಂದ ಅವರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವ ಅಗತ್ಯವಿದೆ. ಪ್ರಮುಖವಾಗಿ ಮಹಿಳೆಯರಲ್ಲಿ ಮುಟ್ಟು, ಸಂತಾನೋತ್ಪತ್ತಿ, ಅತಿಯಾದ ತೂಕ, ಚರ್ಮದಲ್ಲಿನ ಖಾಯಿಲೆಗಳು ಇದಕ್ಕೆಲ್ಲ ಪಿಸಿಓಡಿ ಕಾರಣ, ಸರಿಯಾದ ಜೀವನ ಶೈಲಿ, ದೈಹಿಕ ಚಟುವಟಿಕೆ ಹಾಗೂ ಗುಣಮಟ್ಟದ ಆಹಾರ ಸೇವನೆಯಿಂದ ಇಂತಹ ಸಮಸ್ಯೆಗಳಿಗೆ ಕಡಿವಾಣ ಹಾಕಬಹುದು ಎಂದು ಸಲಹೆ ನೀಡಿದರು.

ಪ್ರತಿಯೊಬ್ಬರೂ ದಿನನಿತ್ಯ ತಮ್ಮ ಜೀವನದಲ್ಲಿ ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ತಮ್ಮ ಆರೋಗ್ಯ ರಕ್ಷಣೆ ಸಾಧ್ಯ, ಇತ್ತೀಚಿನ ದಿನಗಳಲ್ಲಿ ಗರ್ಭಕಂಠದ ಕ್ಯಾನ್ಸರ್ ಹಾಗೂ ಸ್ತನ ಕ್ಯಾನ್ಸರ್‌ನ ಸಂಖ್ಯೆ ಹೆಚ್ಚಾಗಿದೆ. ಹಾಗಾಗಿ ಅದಕ್ಕಾಗಿ ಕೆಲವು ತಪಾಸಣೆ ಹಾಗೂ ಚಿಕಿತ್ಸೆ ಲಭ್ಯವಿದೆ ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಮಹಾನಗರ ಪಾಲಿಕೆಯ ಮಾಜಿ ಉಪ ಮೇಯರ್ ಹೇಮಲತಾ ಕಮಲ್‌ಕುಮಾರ್, ತಾಲ್ಲೂಕು ಯೋಜನಾಧಿಕಾರಿ ಧನಂಜಯ್, ಗ್ರಾಮ ಸಮನ್ವಯ ಅಧಿಕಾರಿ ಸರಸ್ವತಿ, ಮಹಾನಗರ ಪಾಲಿಕೆಯ ಮಾಜಿ ಉಪ ಮೇಯರ್ ಹೇಮಲತಾ ಕಮಲ್ ಕುಮಾರ್, ತಾಲ್ಲೂಕು ಯೋಜನಾಧಿಕಾರಿ ಧನಂಜಯ್, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಸರಸ್ವತಿ, ಸೇವಾ ಪ್ರತಿನಿಧಿಗಳಾದ ಶಾಂತ, ವಿಜಯಲಕ್ಷ್ಮಿ, ರಾಧಿಕಾ ಇನ್ನಿತರರು ಉಪಸ್ಥಿತರಿದ್ದರು.

## ಹಿರಿಯ ನಾಗರೀಕರಿಗೆ ಸನ್ಮಾನ

**ಶಾಂತಿಗ್ರಾಮ:** ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಂಘದ ಎಂಬತ್ತು ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರನ್ನು ಇದೇ ಡಿಸೆಂಬರ್ 28 ರ ಭಾನುವಾರ ಬೆಳಿಗ್ಗೆ 10.30 ಕ್ಕೆ ಶಾಂತಿಗ್ರಾಮದ ದೊಡ್ಡ ಮನೆ ಆವರಣದಲ್ಲಿ ಶಾಂತಿಗ್ರಾಮ ಹಳೆಯ ಶಾಲಾ- ಕಾಲೇಜು ವಿದ್ಯಾರ್ಥಿ ಸಂಘದ ವತಿಯಿಂದ ಸನ್ಮಾನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಈರೇಗೌಡ ಅವರು ವಹಿಸಲಿದ್ದು, ಮುಖ್ಯ ಅತಿಥಿಯಾಗಿ ಜಾನಪದ ಸಾಹಿತಿ ಡಾ.ಹಂಪನಹಳ್ಳಿ ತಿಮ್ಮೇಗೌಡರು ಆಗಮಿಸಲಿದ್ದಾರೆ. ಈ ಸಮಾರಂಭಕ್ಕೆ ವಿಶೇಷ ಅತಿಥಿಗಳಾಗಿ ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಅಧ್ಯಕ್ಷ ಸೋಮನಹಳ್ಳಿ ನಾಗರಾಜ ಅವರು ವಿಶೇಷ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದು ತಿಳಿಸಿದ್ದಾರೆ.

# ಕಲೋತ್ಸವದಲ್ಲಿ ಗಮನ ಸೆಳೆದ ವಿದ್ಯಾರ್ಥಿಗಳು



**ಹೊಳೆನರಸೀಪುರ:** ಪಟ್ಟಣದ ಪ್ರಿಯದರ್ಶಿನಿ ಶಾಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಪ್ರತಿಭಾ ಕಾರಂಜಿ ಹಾಗು ಕಲೋತ್ಸವದಲ್ಲಿ ವಿವಿಧ ವೇಷತೊಟ್ಟು ವಿದ್ಯಾರ್ಥಿಗಳು ಗಮನ ಸೆಳೆದರು. ಸಂಸದ ಶ್ರೇಯಸ್ ಪಟೇಲ್, ಶಿಕ್ಷಕರು ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಕ್ರಿಕೆಟ್ ಪಂದ್ಯಾವಳಿ: ಬೆಂಗಳೂರಿನ ಯುನೈಟೆಡ್ ತಂಡ ವಿನ್ನರ್

• ಪ್ರಜೋದಯ ವರದಿ

**ಅರಸೀಕೆರೆ:** ನಗರದ ಜೇನುಕಲ್ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಹಿರಿಯ ಕ್ರೀಡಾಪಟು ದಿ|| ಹೆಚ್.ಟಿ.ಮಾದೇವ್ ಅವರ ಸ್ಮರಣಾರ್ಥ ನಡೆದ ರಾಜ್ಯಮಟ್ಟದ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯ ಪ್ರತಿಷ್ಠಿತ ಲೆಜೆಂಡ್ ಟ್ರೋಫಿಯನ್ನು ಬೆಂಗಳೂರಿನ ಯುನೈಟೆಡ್ ತಂಡ ತನ್ನದಾಗಿಸಿಕೊಂಡರೆ, ಫ್ರೆಂಡ್ಸ್ ಅರಸೀಕೆರೆ ತಂಡ ರನ್ನರ್ ಅಫ್ ಸ್ಥಾನಕ್ಕೆ ತೃಪ್ತಿಪಟ್ಟುಕೊಳ್ಳುವುದರೊಂದಿಗೆ 3 ದಿನಗಳ ಕ್ರಿಕೆಟ್ ಜಾತ್ರೆ ಮುಕ್ತಾಯಗೊಂಡಿತು.

ಇದೇ ಮೊದಲ ಬಾರಿಗೆ ಫ್ರೆಂಡ್ಸ್ ಕ್ರಿಕೆಟ್ ಕ್ಲಬ್ 40 ವರ್ಷ ಮೇಲ್ಪಟ್ಟ ಕ್ರಿಕೆಟ್ ಆಟಗಾರರಿಗೆ ರಾಜ್ಯಮಟ್ಟದ ಟೂರ್ನಮೆಂಟ್ ಆಯೋಜಿಸುವ ಮೂಲಕ ವೇದಿಕೆ ಕಲ್ಪಿಸಿತು. ತಾಲ್ಲೂಕಿನ 8 ತಂಡಗಳು ಒಳಗೊಂಡಂತೆ ರಾಜ್ಯದ



ಪ್ರತಿಷ್ಠಿತ 8 ತಂಡಗಳು ಈ ಟೂರ್ನಿಯಲ್ಲಿ ಪಾಲ್ಗೊಳ್ಳುವ ಅವಕಾಶವಿದ್ದುದರಿಂದ ಬೆಂಗಳೂರು, ಮೈಸೂರು, ಮಂಗಳೂರು, ಚಿಕ್ಕಮಗಳೂರು ಜಿಲ್ಲೆಗಳ ತಂಡಗಳು ಸೇರಿ ಪ್ರತಿಷ್ಠಿತ 16 ತಂಡಗಳು ಲೆಜೆಂಡ್ ಟ್ರೋಫಿ ತನ್ನದಾಗಿಸಿಕೊಳ್ಳಲು ತೀವ್ರ ಹಣ ಹಣಿ ನಡೆಸಿದರು. ಅಂತಿಮವಾಗಿ ಬೌಲಿಂಗ್, ಬ್ಯಾಟಿಂಗ್ ಹಾಗೂ ಕ್ಷೇತ್ರ ರಕ್ಷಣೆಯಲ್ಲಿ ಗಮನರ್ಹ ಪ್ರದರ್ಶನ ನೀಡಿದ ಬೆಂಗಳೂರು ಯುನೈಟೆಡ್ ತಂಡಕ್ಕೆ ವಿಜಯಲಕ್ಷ್ಮಿ ಒಲಿಯುವ ಮೂಲಕ ಆಕರ್ಷಕ ಟ್ರೋಫಿಯೊಂದಿಗೆ 1 ಲಕ್ಷ ರೂ. ನಗದನ್ನು ತನ್ನದಾಗಿಸಿಕೊಂಡರೆ ರನ್ನರ್‌ಗೆ 50,000 ನಗದು ಬಹುಮಾನ ಜೊತೆಗೆ ಟ್ರೋಫಿ ದೊರೆಯಿತು.

ಮೂರನೇ ಸ್ಥಾನವನ್ನು ಮಲ್ಪೆ ಫಿಶ್ ಮ್ಯಾನ್ ತಂಡ ಭಾಜನವಾದರೆ, ನಾಲ್ಕನೇ ಸ್ಥಾನಕ್ಕೆ ಅಟ್ಯಾಕರ್ಸ್ ಅರಸೀಕೆರೆ ತಂಡವು ತೃಪ್ತಿ ಪಟ್ಟುಕೊಳ್ಳಬೇಕಾಯಿತು. ಸರಣಿ ಉದ್ದಕ್ಕೂ ಉತ್ತಮ ಬೌಲಿಂಗ್ ದಾಳಿಯೊಂದಿಗೆ ಸ್ಫೋಟಕ ಬ್ಯಾಟಿಂಗ್ ನಡೆಸಿದ ಇಮ್ರಾನ್ ಸರಣಿ ಶ್ರೇಷ್ಠ ಆಟಗಾರರಾಗಿ ಹೊರಹೊಮ್ಮಿದರು.

ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಮಾತನಾಡಿ, ವ್ಯವಸ್ಥಿತವಾಗಿ ಕ್ರೀಡಾಕೂಟ ಆಯೋಜಿಸಿದ್ದ ಫ್ರೆಂಡ್ಸ್ ಕ್ರಿಕೆಟ್ ಕ್ಲಬ್‌ಗೆ ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ ಮುಂದಿನ ದಿನಗಳಲ್ಲಿ ಹೊನಲು ಬೆಳಕಿನ ರಾಜ್ಯಮಟ್ಟದ ಕ್ರಿಕೆಟ್ ವಾಲಿಬಾಲ್ ಹಾಗೂ ಕಬ್ಬಡ್ಡಿ ಕ್ರೀಡಾಕೂಟ ಆಯೋಜಿಸಿದರೆ ನನ್ನ ಬೆಂಬಲ ಇದೆ ಎಂದರು.

ಜೆಡಿಎಸ್ ಮುಖಂಡ ವಿವೇಕ್ ಅನಂತ ಸಮೂಹ ಶಿಕ್ಷಣ ಸಂಸ್ಥೆಗಳ ಚೇರ್ಮನ್ ಆರ್.ಅನಂತಕುಮಾರ್ ಡಾ||ಶಿವಕುಮಾರ್, ಕೆವಿಎನ್ ಶಿವು, ರಮೇಶ್ ನಾಯ್ಡು ಇತರರಿದ್ದರು.

# ಮಾದರಿ ತಾಲ್ಲೂಕಾಗಿ ಸಕಲೇಶಪುರ: ಸಂಕಲ್ಪ

## ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸಯ್ಯದ್ ಮುಫೀಜ್

• ಪ್ರಜೋದಯ ವರದಿ

**ಸಕಲೇಶಪುರ:** ಪಾರದರ್ಶಕತೆ, ಪ್ರಾಮಾಣಿಕತೆ ಮತ್ತು ಜನರ ಜೊತೆಯಲ್ಲಿ ಆಡಳಿತ ನಡೆಸುವುದಾಗಿ ಭರವಸೆ ನೀಡುತ್ತೇನೆ. ಅಧಿಕಾರಿಗಳ ಸಹಕಾರ, ಜನಪ್ರತಿನಿಧಿಗಳ ಮಾರ್ಗದರ್ಶನ ಹಾಗೂ ನಾಗರಿಕರ ಸಲಹೆಗಳೊಂದಿಗೆ ಸಕಲೇಶಪುರವನ್ನು ಮಾದರಿ ತಾಲ್ಲೂಕಾಗಿ ರೂಪಿಸುವ ಸಂಕಲ್ಪ ನಮ್ಮದು ಎಂದು ನೂತನವಾಗಿ ತಾಲ್ಲೂಕು ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಪದಗ್ರಹಣ ಮಾಡಿದ ಸಯ್ಯದ್ ಮುಫೀಜ್ ಹೇಳಿದರು.

ಪಟ್ಟಣದ ಪೂರ್ವ ಭಾಗದ ಬಳಿ ಇರುವ ತಾಲ್ಲೂಕು ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಕಟ್ಟಡದಲ್ಲಿ ಪದಗ್ರಹಣದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದೆ ಯಾವುದೇ ಕಟ್ಟಡ ನಿರ್ಮಾಣ



ಅನುಮೋದನೆಗಾಗಿ ಹಾಸನಕ್ಕೆ ತೆರಳಬೇಕಾಗುತ್ತಿತ್ತು. ಇದರಿಂದ ಸಾರ್ವಜನಿಕರಿಗೆ ಹೆಚ್ಚಿನ ತೊಂದರೆ ಉಂಟಾಗುತ್ತಿತ್ತು. ಈ ಸಮಸ್ಯೆಯನ್ನು ಮನಗಂಡ ಕಾಂಗ್ರೆಸ್ ಮುಖಂಡರು ಜನರ ತೊಂದರೆ ನಿವಾರಣೆಯ ಉದ್ದೇಶದಿಂದ ಸಕಲೇಶಪುರದಲ್ಲೇ ಯೋಜನಾ ಅಭಿವೃದ್ಧಿ ಪ್ರಾಧಿಕಾರವನ್ನು ಸ್ಥಾಪಿಸಿದ್ದಾರೆ ಎಂದು ತಿಳಿಸಿದರು.

ಸಕಲೇಶಪುರ ಕೇವಲ ಒಂದು ಪಟ್ಟಣವಲ್ಲ. ಇದು ಪಶ್ಚಿಮಘಟ್ಟದ ಮಡಿಲಲ್ಲಿ ಬೆಳೆದ ಹಸಿರು ನಾಡು, ಕಾಫಿಮಸಾಲೆಗಳ ಭೂಮಿ, ವಿಭಿನ್ನ ಧರ್ಮಸಂಸ್ಕೃತಿಗಳ ಸೌಹಾರ್ದತೆಗೆ ಉದಾಹರಣೆ. ಇಂತಹ ನಾಡಿನ ಅಭಿವೃದ್ಧಿಗೆ ನೇತೃತ್ವ ನೀಡುವ ಅವಕಾಶ ದೊರೆತಿರುವುದು ನನ್ನ ಪಾಲಿಗೆ ಸೇವೆಯ ಅವಕಾಶವಾಗಿದೆ ಎಂದು ಹೇಳಿದರು.

ನಗರಾಭಿವೃದ್ಧಿ ಯೋಜನೆಗಳು ಜನರ ಬದುಕಿಗೆ ನೇರವಾಗಿ ಲಾಭ ನೀಡಬೇಕು ಎಂಬುದು ನನ್ನ ನಂಬಿಕೆ. ಮುಂದಿನ ದಿನಗಳಲ್ಲಿ ಯೋಜಿತ ನಗರ ವಿಸ್ತರಣೆ ಹಾಗೂ ಮೂಲ ಸೌಕರ್ಯಗಳ ಬಲವರ್ಧನೆಗೆ ಆದ್ಯತೆ ನೀಡಲಾಗುವುದು ಎಂದರು.

ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮುರಳಿ ಮೋಹನ್, ತಾಲ್ಲೂಕು ಕಾಂಗ್ರೆಸ್ ಅಧ್ಯಕ್ಷ ಬೈರ್‌ಮುಡಿ ಚಂದ್ರು ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಜಿಲ್ಲಾ ಉಪ ನಿರ್ದೇಶಕ ರಮೇಶ್, ಪ್ರಾಧಿಕಾರದ ಸದಸ್ಯರಾದ ಬೈಕೆರೆ ದೇವರಾಜ್, ಚರಣ್‌ಗೌಡ, ವಿಜಯ್ ಕುಮಾರ್, ಸಬಾ ಬಾಸ್ಕರ್, ಸಯ್ಯದ್ ಅಸ್ಲಂ, ಅನ್ನಪೂರ್ಣ ಶ್ರೀಶೈಲ, ಯಡೆಹಳ್ಳಿ ಮಂಜುನಾಥ್ ಇನ್ನಿತರರಿದ್ದರು.

## ಗುಣಮಟ್ಟದ ವಿಜ್ಞಾನ ಬರವಣಿಗೆ ಹೆಚ್ಚಾದರೆ ಜನರ ಬದುಕಿನ ಭಾಗವಾಗುತ್ತದೆ: ಡಾ. ಬಿ.ಎಸ್.ಶೈಲಜಾ

# ವಿಜ್ಞಾನ ಜನಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ತಲುಪಬೇಕು

• ಪ್ರಜೋದಯ ವರದಿ

**ಹಾಸನ:** ಕನ್ನಡದಲ್ಲಿ ಗುಣಮಟ್ಟದ ವಿಜ್ಞಾನ ಬರವಣಿಗೆ ಹೆಚ್ಚಾದರೆ, ವಿಜ್ಞಾನವು ಜನರ ಬದುಕಿನ ಭಾಗವಾಗುತ್ತದೆ. ಇದು ಭಾಷೆಯ ಸೇವೆಯಷ್ಟೇ ಅಲ್ಲ, ಸಮಾಜದ ಬೌದ್ಧಿಕ ಬೆಳವಣಿಗೆಯ ಸೇವೆಯೂ ಹೌದು ಎಂದು ನೆಹರು ತಾರಾಲಯದ ಮಾಜಿ ನಿರ್ದೇಶಕಿ ಹಾಗೂ ಖಗೋಳ ವಿಜ್ಞಾನಿ ಬಿ.ಎಸ್. ಶೈಲಜ ಹೇಳಿದರು.

ಭಾರತ ಜ್ಞಾನ ವಿಜ್ಞಾನ ಸಮಿತಿಯ ಹಾಸನ ಜಿಲ್ಲಾ ಸಮಿತಿಯು ನಗರದ ಬಿಜಿವಿಎಸ್ ಕಚೇರಿಯಲ್ಲಿ ಆಯೋಜಿಸಿದ್ದ ''ಆಗಸದ ಅಚ್ಚರಿಗಳು'' ಖಭೌತ ವಿಜ್ಞಾನಿಯೊಂದಿಗೆ ಸಂವಾದ ಕುರಿತ ಸಂವಾದ ಕಾರ್ಯಕ್ರಮದಲ್ಲಿ ಕನ್ನಡದಲ್ಲಿ ವಿಜ್ಞಾನ ಪ್ರಸಾರದಲ್ಲಿ ಸಾಹಿತ್ಯದ ಜವಾಬ್ದಾರಿ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ವಿಜ್ಞಾನವು ಪ್ರಯೋಗಶಾಲೆ ಮತ್ತು ಸಂಶೋಧನಾ ಪ್ರಬಂಧಗಳಿಗೆ ಮಾತ್ರ ಸೀಮಿತವಾಗದೆ ಜನಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ತಲುಪಬೇಕು ಎಂದು ಹೇಳಿದ ಅವರು, ವಿಜ್ಞಾನವನ್ನು ಜನಸಾಮಾನ್ಯರ ಭಾಷೆಯಲ್ಲಿ ತಲುಪಿಸುವಲ್ಲಿ ಕನ್ನಡ ವಿಜ್ಞಾನ ಬರವಣಿಗೆಯ ಪ್ರಮಾಣ ಹೆಚ್ಚಾಗಬೇಕಿದೆ ಈ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡ ವಿಜ್ಞಾನಿಗಳ ಹಾಗೂ ವಿಜ್ಞಾನಾಸಕ್ತರ ಜವಾಬ್ದಾರಿ ದೊಡ್ಡದಿದೆ ಎಂದರು

ಕನ್ನಡದಲ್ಲಿ ವಿಜ್ಞಾನ ಬರವಣಿಗೆಯಲ್ಲಿ ಕೇವಲ ಅನುವಾದವಲ್ಲ, ಅರ್ಥವನ್ನು ಸರಿಯಾಗಿ ಗ್ರಹಿಸಿ ಸರಿಯಾದ ಪದಗಳನ್ನು ಆಯ್ಕೆ ಮಾಡುವ ಜವಾಬ್ದಾರಿ ಬಹಳ ಮುಖ್ಯ. ತಪ್ಪು ಪದಬಳಕೆ ಮತ್ತು ಅತಿರಂಜಿತ ಅನುವಾದಗಳು ವಿಜ್ಞಾನವನ್ನು ಅಂಧಶ್ರದ್ಧೆಯತ್ತ ಕರೆದೊಯ್ಯುವ ಅಪಾಯವಿದೆ ಎಂದು ಎಚ್ಚರಿಸಿದ ಅವರು, ವಿಶೇಷವಾಗಿ ಗಾಡ್ ಪಾರ್ಟಿಕಲ್ ಎಂಬ ಪದವನ್ನು ದೇವಕಣ ಎಂದು ಬಳಸು



ವುದು ವೈಜ್ಞಾನಿಕವಾಗಿ ತಪ್ಪು ಎಂದು ಅವರು ಹೇಳಿದರು.

ಮಾಧ್ಯಮಗಳು ಶೀರ್ಷಿಕೆ ಮತ್ತು ರೋಚಕತೆಯ ಹಿಂದೆ ಹೋಗದೆ ವಿಷಯದ ವೈಜ್ಞಾನಿಕ ಸ್ಪಷ್ಟತೆಯನ್ನು ಕಾಪಾಡಬೇಕು ಎಂದು ಸಲಹೆ ನೀಡಿದರಲ್ಲದೆ, ಪಂಚಾಂಗ, ಅಧಿಕ ವರ್ಷ, ನಕ್ಷತ್ರಗಳು ಇವೆಲ್ಲವೂ ಅಂಧ ನಂಬಿಕೆಗಳಲ್ಲ; ಅವು ಸೂರ್ಯಚಂದ್ರ, ನಕ್ಷತ್ರಗಳ ಚಲನೆಯನ್ನು ಆಧರಿಸಿದ ವೈಜ್ಞಾನಿಕ ಕಾಲಗಣನಾ ವ್ಯವಸ್ಥೆಗಳೆಂದು ಅವರು ವಿವರಿಸಿದರು.

ಯುಎಫ್‌ಓ, ಏಲಿಯನ್, ಧೂಮಕೇತುಗಳ ಕುರಿತ ಚರ್ಚೆಗಳಲ್ಲೂ ವಿಜ್ಞಾನ ಮತ್ತು ಊಹೆಗಳ ನಡುವಿನ ಗಡಿ ಸ್ಪಷ್ಟವಾಗಿರಬೇಕು. ಯಾರು ಹೇಳಿದ್ದಾರೆ ಎಂಬುದಕ್ಕಿಂತ, ಯಾವ ಸಾಕ್ಷ್ಯ ಇದೆ ಎಂಬುದೇ ವಿಜ್ಞಾನದ ಅಳತೆಯಾಗಬೇಕು. ನಕ್ಷತ್ರದಲ್ಲಿ ಜೀವ ಸಾಧ್ಯತೆ ಇದೆಯೇ? ವಿಜ್ಞಾನ ಹೇಗೆ ಉತ್ತರ ಹುಡುಕುತ್ತದೆ ಎಂಬುದು ಮಾನವನನ್ನು ದಶಕಗಳಿಂದ ಕಾಡುತ್ತಿದೆ. ಆದರೆ, ವಿಜ್ಞಾನ ಈ ಪ್ರಶ್ನೆಗೆ ಕಲ್ಪನೆಗಳ ಮೂಲಕ ಅಲ್ಲ, ಸಾಕ್ಷ್ಯ ಮತ್ತು ಕ್ರಮಬದ್ಧ ಪರಿಶೀಲನೆಯ ಮೂಲಕ ಉತ್ತರ ಹುಡುಕುತ್ತದೆ ಎಂದು ತಿಳಿಸಿದರು.

ವಿಜ್ಞಾನಿಗಳು ಗಮನಿಸುವುದು ನಕ್ಷತ್ರದ ಆಯುಷ್ಯ. ಭೂಮಿಯ ಮೇಲೆ ಜೀವ ಉತ್ಪತ್ತಿಯಾಗಲು ಸುಮಾರು ಮೂರುವರೆ ಬಿಲಿಯನ್ ವರ್ಷಗಳು ಬೇಕಾಯಿತು ಎಂದರು.


ವಿಜಯಾ ಶಾಲೆಯ ಸಂಸ್ಥಾಪಕಿ ತಾರಾಸ್ವಾಮಿ, ಕವಯತ್ರಿ ಜ.ನಾ. ತೇಜಶ್ರೀ, ವಿಜ್ಞಾನ ಬರಹಗಾರ ಕೆ. ಎಸ್.ರವಿಕುಮಾರ್, ಬ್ಯಾಂಕ್ ನೌಕರರ ಸಂಘದ ಪರಮಶಿವಯ್ಯ, ಬಿಜಿವಿಎಸ್ ಸಮತ ಸಂಚಾಲಕಿ ಮಮತ ಶಿವು, ಬಿ.ಆರ್.ಪಿ. ಪ್ರಮೀಳ, ಲೋಲಾಕ್ಷಿ, ವಿವಿಧ ಶಾಲೆಗಳ ಶಿಕ್ಷಕರು, ಕಾಲೇಜಿನ ವಿದ್ಯಾರ್ಥಿಗಳು, ಬಿಜಿವಿಎಸ್ ಕಾರ್ಯಕರ್ತರು, ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಕೌಶಲ್ಯಾಧಾರಿತ ಕಲಿಕೆಗೆ ಮಹತ್ವ ನೀಡಿ

• ಪ್ರಜೋದಯ ವರದಿ

**ಹಾಸನ:** ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಮುಂದಿನ ಶೈಕ್ಷಣಿಕ ಹಂತಕ್ಕೆ ಸಾಗುವ ಸಂದರ್ಭದಲ್ಲಿ ಸರಿಯಾದ ಮಾರ್ಗದರ್ಶನ ಅತ್ಯಂತ ಅವಶ್ಯಕ. ಕಾರ್ಯಾಗಾರಗಳು ವಿದ್ಯಾರ್ಥಿ ಗಳಿಗೆ ತಮ್ಮ ಆಸಕ್ತಿ, ಸಾಮರ್ಥ್ಯ ಹಾಗೂ ಭವಿಷ್ಯದ ಗುರಿಗಳನ್ನು ಸ್ಪಷ್ಟವಾಗಿ ಅರಿಯಲು ಸಹಕಾರಿಯಾಗುತ್ತವೆ. ಕೇವಲ ಅಂಕಗಳ ಹಿಂದೆ ಓಡುವುದಕ್ಕಿಂತ ಕೌಶಲ್ಯಾಧಾರಿತ ಕಲಿಕೆಗೆ ಮಹತ್ವ ನೀಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಭಾಗ್ಯಮ್ಮ ಕರೆ ನೀಡಿದರು.

ನಗರದ ಬಿಜಿಎಸ್ ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜು ವತಿಯಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಲಾಗಿದ್ದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು. ಕಾಲ ನಿರ್ವಹಣೆ, ಪರೀಕ್ಷಾ ತಯಾರಿ ಹಾಗೂ ವೃತ್ತಿ ಆಯ್ಕೆ ಬಗ್ಗೆ ಸೂಕ್ತ ಮಾಹಿತಿ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರಲ್ಲದೆ, ಶಿಕ್ಷಣ ಸಂಸ್ಥೆಗಳು ಇಂತಹ ಉಪಯುಕ್ತ ಕಾರ್ಯಕ್ರಮಗಳನ್ನು



ನಿರಂತರವಾಗಿ ಆಯೋಜಿಸುವುದು ಶ್ಲಾಘನೀಯ ಎಂದು ಹೇಳಿದರು.

ರಾಷ್ಟ್ರಪ್ರಶಸ್ತಿ ಪಡೆದ ಉಪನ್ಯಾಸಕ ದಕ್ಷಿಣ ಕನ್ನಡದ ಯಾಕೂಬ್ ಎಸ್. ಕೊಯ್ಯಾರ್ ಅವರು ಮಾತನಾಡಿ, ಗಣಿತವೆಂದರೆ ಭಯಪಡುವ ವಿಷಯವಲ್ಲ, ಅದು ತಾರ್ಕಿಕ ಚಿಂತನೆ ಮತ್ತು ಸಮಸ್ಯೆ ಪರಿಹಾರ ಕೌಶಲ್ಯವನ್ನು ಬೆಳೆಸುವ ಅತ್ಯಂತ ಉಪಯುಕ್ತ ವಿಷಯ. ದಿನನಿತ್ಯದ ಜೀವನದಲ್ಲಿಯೇ ಗಣಿತದ ಅನೇಕ ಉದಾಹರಣೆಗಳು ಅಡಗಿವೆ. ಸೂಕ್ತ ವಿಧಾನದಲ್ಲಿ ಕಲಿತರೆ ಗಣಿತ ಅತಿ ಸುಲಭವಾಗುತ್ತದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಮೂಲಭೂತ ಸಂಪ್ರದಾಯಗಳನ್ನು ಸ್ಪಷ್ಟವಾಗಿ ಅರ್ಥ ಮಾಡಿಕೊಂಡು ನಿರಂತರ ಅಭ್ಯಾಸ ಮಾಡಿದರೆ ಗಣಿತದಲ್ಲಿ ಉತ್ತಮ ಸಾಧನೆ ಸಾಧ್ಯ. ಸೂತ್ರಗಳನ್ನು ಕೇವಲ ಜಪಿಸುವುದಕ್ಕಿಂತ ಅವುಗಳ ಅರ್ಥ ತಿಳಿದುಕೊಳ್ಳಬೇಕು. ತಪ್ಪುಗಳನ್ನು ಭಯಪಡುವುದಕ್ಕಿಂತ ಅವುಗಳಿಂದ ಕಲಿಯುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಬಿಜಿಎಸ್ ಕಾಲೇಜಿನ ಪ್ರಾಂಶುಪಾಲ ದಿವ್ಯಕುಮಾರ್, ಭಾಗಮಂಡಲ ಬಿಜಿಎಸ್ ವಿದ್ಯಾಸಂಸ್ಥೆ ಪ್ರಾಂಶುಪಾಲ ಕೀರ್ತಿ ಕುಮಾರ್, ಇಸಿಒ ನವೀನ್ ಕುಮಾರ್, ಎಸ್‌ಇಎಸ್ ವಿದ್ಯಾಸಂಸ್ಥೆ ಪ್ರಾಂಶುಪಾಲ ನಾರಾಯಣ್, ಪ್ರಾಧ್ಯಾಪಕರು ಹಾಜರಿದ್ದರು.

## ಡಿ.27ಕ್ಕೆ ಸಪ್ನದಿಂದ 70 ಕೃತಿಗಳ ಲೋಕಾರ್ಪಣೆ

• ಪ್ರಜೋದಯ ವರದಿ

**ಹಾಸನ:** ನಗರದ ಸಪ್ನಬುಕ್ ಹೌಸ್‌ನಲ್ಲಿ ಡಿ.27ರ ಶನಿವಾರ ಬೆಳಿಗ್ಗೆ 10 ಗಂಟೆಗೆ ಸಪ್ನ ಪ್ರಕಟಿಸಿರುವ 70 ಪುಸ್ತಕಗಳ ಲೋಕಾರ್ಪಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಸಾಹಿತಿ ಕೌಂಡಿನ್ಯ, ಪತ್ರಕರ್ತ ಬಿ. ಆರ್.ಬೊಮ್ಮೇಗೌಡ, ಸಾಹಿತಿಗಳಾದ ಎನ್.ಎಲ್.ಚನ್ನೇಗೌಡ, ಹೊನ್ನಶೆಟ್ಟಿ ಹಳ್ಳಿ ಗಿರಿರಾಜ್, ಶೈಲಜಾ ಹಾಸನ ಹಾಗು ಕೌಶಿಕ್ ಕೂಡುರಸ್ತೆ ಪಾಲ್ಗೊಳ್ಳ ಲಿದ್ದಾರೆ. ಸಪ್ನಾ ಬುಕ್ ಪ್ರತಿ ವರ್ಷ ನವೆಂಬರ್‌ನಲ್ಲಿ ಕನ್ನಡ ರಾಜ್ಯೋತ್ಸವ ಅಂಗವಾಗಿ ಉತ್ತಮ ಕನ್ನಡ ಕೃತಿಗಳ ಪ್ರಕಟಣೆ, ಸಾಹಿತಿಗಳಿಗೆ ಗೌರವ ಸಮರ್ಪಣೆ, ಪುಸ್ತಕಗಳಿಗೆ ವಿಶೇಷ ರಿಯಾಯಿತಿ ನೀಡುವ ಮೂಲಕ ಕನ್ನಡ ಪುಸ್ತಕೋದ್ಯಮದ ಅಭಿವೃದ್ಧಿಗೆ ದೊಡ್ಡ ಕೊಡುಗೆ ನೀಡುತ್ತಿದೆ.

## ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಹಾಸನ:** ಮನೆ ಛಾವಣಿಯಿಂದ ಬಂದ ಕಳ್ಳರು ನಗದು ಸೇರಿ 1.4 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ಬಿಟ್ಟಗೌಡನಹಳ್ಳಿ ಗ್ರಾಮದಲ್ಲಿ ನಡೆದಿದೆ.

ನಿವಾಸಿ ಚಂದ್ರಮ್ಮ ಅವರು ಡಿ.20 ರಂದು ಮನೆಗೆ ಬೀಗ ಹಾಕಿಕೊಂಡು ಮಂತ್ರಾಲಯಕ್ಕೆ ತೆರಳಿದ್ದರು. ಮಾರನೇ ದಿನ ಎದುರು ಮನೆಯ ಸಾಕಮ್ಮ ಎಂಬುವವರು ಕರೆ ಮಾಡಿ ವಿಷಯ ತಿಳಿಸಿದ್ದಾರೆ. ಅಡುಗೆ ಮನೆ ಛಾವಣಿ ಶೀಟ್ ತೆರೆದು ಒಳನುಗ್ಗಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 4 ಗ್ರಾಂ ತೂಕದ 1 ಚಿನ್ನದ ಉಂಗುರ, 5 ಗ್ರಾಂ ತೂಕದ 1 ಚಿನ್ನದ ಉಂಗುರ, 100 ಗ್ರಾಂ ತೂಕದ ಒಂದು ಬೆಳ್ಳಿ ಲೋಟ, 150 ಗ್ರಾಂ ತೂಕದ ಒಂದು ಜೊತೆ ಬೆಳ್ಳಿ ದೀಪ ಹಾಗು 25 ಸಾವಿರ ರೂ. ದೋಚಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮನೆಯ ಕಾಂಪೌಂಡ್‌ನಿಂದ 4 ಕುರಿಗಳ ಕಳವು

• ಪ್ರಜೋದಯ ವರದಿ



**ಬೇಲೂರು:** ಮನೆಯ ಕಾಂಪೌಂಡ್‌ನಲ್ಲಿ ಕಟ್ಟಿ ಹಾಕಿದ್ದ 4 ಕುರಿಗಳನ್ನು ರಾತ್ರೋ ರಾತ್ರಿ ಕಳವು ಮಾಡಿರುವ ಘಟನೆ ಹಳೇಬೀಡಿನಲ್ಲಿ ನಡೆದಿದೆ.

ಜಿ.ಎಂ.ಸುದೀಪ್ ಎಂಬುವವರ ಮನೆಯಲ್ಲಿ ಡಿ.18ರ ರಾತ್ರಿ ಕಳ್ಳತನವಾಗಿದೆ. ಮಧ್ಯರಾತ್ರಿ 1 ಗಂಟೆ ಸಮಯದಲ್ಲಿ ಒಂದು ಕುರಿ ಜೋರಾಗಿಕೂಗಾಡಿದ್ದರಿಂದ ಸುದೀಪ್ ಅವರು ಎದ್ದು ಬಾಗಿಲು ತೆರೆಯಲು ಬಂದಾಗ ಹೊರಗಿನಿಂದ ಚೀಲಕ ಹಾಕಲಾಗಿತ್ತು. ಕಿಟಕಿಯಿಂದ ನೋಡಿದಾಗ ಕಾರಿನಲ್ಲಿ ಬಂದಿದ್ದ ಮುಸುಕುಧಾರಿಗಳು ನಾಲ್ಕು ಕುರಿಗಳನ್ನು ಕಾರಿಗೆ ಹಾಕಿಕೊಂಡು ಅಲ್ಲಿಂದ ಎಸ್ಕೇಪ್ ಆಗಿದ್ದಾರೆ. ಕಾಂಪೌಂಡ್‌ನಲ್ಲಿದ್ದ ಐದು ಕುರಿಗಳ ಪೈಕಿ ಒಂದನ್ನು ಮಾತ್ರ ಬಿಟ್ಟಿದ್ದಾರೆ. ಕಳುವಾಗಿರುವ 4 ಕುರಿಗಳ ಬೆಲೆ ಸುಮಾರು 60 ಸಾವಿರ ರೂ. ಆಗಿದೆ. ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಡಿ. 24-25ರಂದು ರಕ್ಷಿದಿಯಲ್ಲಿ ನಾಟಕ ಪ್ರದರ್ಶನ

• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನ ರಕ್ಷಿದಿ ಗ್ರಾಮದ ಪೂರ್ಣಚಂದ್ರ ತೇಜಸ್ವಿ ರಂಗ ಮಂದಿರದಲ್ಲಿ ಡಿ. 24 ಹಾಗು 25 ರಂದು ಬೆಳ್ಳೇಕೆರೆ ಜೈ ಕರ್ನಾಟಕ ಸಂಘದಿಂದ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಕಾರ್ಕಳದ ಯಕ್ಷ ರಂಗಾಯಣದ ರೆಪರ್ಟರಿ ಕಲಾವಿದರು ಗುಲಾಮನ ಸ್ವಾತಂತ್ರ್ಯ ಯಾತ್ರೆ (ಬುಧವಾರ ಸಂಜೆ 7) ಹಾಗು ಮಹಾತ್ಮರ ಬರವಿಗಾಗಿ (ಗುರುವಾರ ಸಂಜೆ 7) ಎಂಬ ನಾಟಕ ಪ್ರದರ್ಶನವಾಗಲಿದೆ. ಪ್ರವೇಶ ಉಚಿತವಾಗಿದ್ದು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಹಿರಿಯ ರಂಗಕರ್ಮಿ ಪ್ರಸಾದ್ ರಕ್ಷಿದಿ ಅವರು ತಿಳಿಸಿದ್ದಾರೆ.

# ಬೆಂಗಳೂರಿನಲ್ಲಿ ಮತ್ತಷ್ಟು ಹಿಗ್ಗಲಿದೆ ಮೆಟ್ರೋ ವ್ಯಾಪ್ತಿ

### 96 ರಿಂದ 175 ಕಿ.ಮೀ.ಗೆ ವಿಸ್ತಾರ | 2027ರ ಡಿಸೆಂಬರ್‌ಗೆ ಯೋಜನೆ ಪೂರ್ಣ

• ಪ್ರಜೋದಯ ವರದಿ

**ಬೆಂಗಳೂರು:** ಬೆಂಗಳೂರಿನಲ್ಲಿ ಮೆಟ್ರೋ ಮಾರ್ಗ ಹೆಚ್ಚಳ ಮಾಡಿ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಸರ್ಕಾರ ಮುಂದಾಗಿದೆ. 2027ರ ಡಿಸೆಂಬರ್ ವೇಳೆಗೆ ಬೆಂಗಳೂರು ನಗರದಲ್ಲಿ 175 ಕಿ.ಮೀ ಉದ್ದದಷ್ಟು ಮೆಟ್ರೋ ಮಾರ್ಗ ಕಾರ್ಯಾರಂಭವಾಗಲಿದೆಯೆಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಿಳಿಸಿದ್ದಾರೆ.

ಬಿಎಂಆರ್ ಸಿಎಲ್ ಕಚೇರಿಯಲ್ಲಿ ಮೆಟ್ರೋ ಕಾಮಗಾರಿಗಳ ಕುರಿತು ಸೋಮವಾರ ಅಧಿಕಾರಿಗಳ ಜೊತೆಗಿನ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರಸ್ತುತ 96 ಕಿ.ಮೀ. ಉದ್ದದ ಮೆಟ್ರೋ ಮಾರ್ಗ ಕಾರ್ಯನಿರ್ವಹಿಸುತ್ತಿದೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಳದಿ ಮಾರ್ಗಕ್ಕೆ ಚಾಲನೆ ನೀಡಲಾಗಿದ್ದು, 24 ಕಿ.ಮೀ. ಉದ್ದದ ಮೆಟ್ರೋ ಸಂಚಾರ ಆರಂಭ ಮಾಡಲಾಗಿದೆ. 1 ಲಕ್ಷ ಜನರು ಈ ಮಾರ್ಗದಲ್ಲಿ ಸಂಚಾರ ಮಾಡುತ್ತಿದ್ದು, ಶೇ.30 ರಷ್ಟು ದಟ್ಟಣೆ ಕಡಿಮೆಯಾಗಿದೆ ಎಂದು ತಿಳಿಸಿದರು.

ಮುಂದಿನ ವರ್ಷ (2026ರಲ್ಲಿ) 41 ಕಿ.ಮೀ. ಉದ್ದದ ಮಾರ್ಗ ಕಾರ್ಯಾರಂಭ ಮಾಡಲಾಗುವುದು. 2027ರ ಡಿಸೆಂಬರ್ ವೇಳೆಗೆ ವಿಮಾನ ನಿಲ್ದಾಣ ಮಾರ್ಗ ಸೇರಿ 38 ಕಿ.ಮೀ. ಉದ್ದದ ಮಾರ್ಗ ಕಾರ್ಯಾರಂಭಿಸಲಿದೆ. ಆ ಮೂಲಕ ಬೆಂಗಳೂರಿನಲ್ಲಿ 175 ಕಿ.ಮೀ. ಉದ್ದದ ಮಾರ್ಗ ಕಾರ್ಯನಿರ್ವಹಿಸಲಿದೆ. ಅದರ ಹೊರತಾಗಿ ಮಾಗಡಿ ರಸ್ತೆಯಲ್ಲಿ ತಾವರಕೆರೆವರೆಗೆ, ಹೊಸ ಕೋಟೆ, ಬಿಡದಿ, ನೆಲಮಂಗಲವರೆಗೆ ವಿಸ್ತರಿಸುವ ಯೋಜನೆ ಹಮ್ಮಿಕೊಂಡಿದ್ದೇವೆ. ಒಂದು ಕಡೆ ಯೋಜನೆ ಕೈಗೆತ್ತಿಕೊಂಡಿದ್ದು, ಉಳಿದ ಕಡೆಗಳಲ್ಲಿ ಡಿಪಿಆರ್ ಸಿದ್ಧಪಡಿಸಲಾಗುತ್ತಿದೆಂದು ತಿಳಿಸಿದರು.




ಮುಂದಿನ ತಿಂಗಳು ಮೆಟ್ರೋ ಮೂರನೇ ಹಂತದ ಯೋಜನೆಯಲ್ಲಿ ಎಲಿವೇಟೆಡ್ ಕಾರಿಡಾರ್ (ಡಬಲ್ ಡೆಕ್ಕರ್) ಸೇರಿ ಸುಮಾರು 100 ಕಿ.ಮೀ. ಉದ್ದದ ಮೆಟ್ರೋ ಕಾಮಗಾರಿಗೆ ಟೆಂಡರ್ ಕರೆಯಲಾಗುವುದು. ಸಂಚಾರ ದಟ್ಟಣೆ ನಿಯಂತ್ರಿಸಿ ಜನರ ಪ್ರಯಾಣಕ್ಕೆ ಅನುಕೂಲವಾಗಲು ಕಾಮಗಾರಿ ವೇಗವಾಗಿ ನಡೆಸುತ್ತಿದೆ. ಮೆಟ್ರೋ ನಿಲ್ದಾಣಗಳ ಬಳಿ ಹೆಚ್ಚಿನ ಜಮೀನು ಸ್ವಾಧೀನಪಡಿಸಿಕೊಂಡು ವಾಣಿಜ್ಯ ಚಟುವಟಿಕೆಗೆ ಅವಕಾಶ ಕಲ್ಪಿಸುವಂತೆ ಸೂಚಿಸಲಾ ಗಿದೆ. ವಾಹನ ನಿಲುಗಡೆಗೂ ಅವಕಾಶ ಕಲ್ಪಿಸಬೇಕಿ ದೆಯೆಂದರು.

3ನೇ ಹಂತದ ಯೋಜನೆ ಟೆಂಡರ್ ಕರೆಯಲಾಗುತ್ತಿದೆ. 25,311 ಸಾವಿರ ಕೋಟಿ ರೂ. ವೆಚ್ಚದ ಈ ಕಾಮಗಾರಿಗೆ, ಜೈಕಾ ದಿಂದ 15,600 ಕೋಟಿ ರೂ. ಸಾಲ ಮಾಡಲಾಗುತ್ತಿದೆ. ಉಳಿದಂತೆ ಎಲಿವೇಟೆಡ್ ಕಾರಿಡಾರ್‌ಗೆ 9,700 ಕೋಟಿ ಮೊತ್ತದ ಟೆಂಡರ್ ಅನ್ನು ಜನವರಿಯಲ್ಲಿ ಕರೆಯಲಾಗುವುದು. ಮೂರನೇ ಹಂತದ ಯೋಜನೆಯಲ್ಲಿ ಸಂಪೂರ್ಣವಾಗಿ ಎಲ್ಲಾ ಮಾರ್ಗದಲ್ಲೂ ಎಲಿವೇಟೆಡ್ ಕಾರಿಡಾರ್ ನಿರ್ಮಿಸಲಾಗುವುದು. ತಾವರೆಕೆರೆ ಬಳಿ ಮೆಟ್ರೋ ನಿಲ್ದಾಣಕ್ಕೆ ಜಾಗ ಅಂತಿಮಗೊಳಿಸಲು ಪ್ರಯತ್ನಿಸುತ್ತಿದ್ದೇವೆ. ಹಾಸನದಿಂದ ಬರುವ ಜನರು ಈ ಮಾರ್ಗ ವಾಗಿ ಬರುವುದರಿಂದ ಇಲ್ಲೂ ಡಬಲ್ ಡೆಕ್ಕರ್ ಮಾಡಲುತೀರ್ಮಾನಿಸಿದ್ದೇವೆಂದು ತಿಳಿಸಿದರು.

**ಯಾರಿಗೂ ಹಣ ನೀಡುವುದಿಲ್ಲ**

ನಾವು ಯಾರಿಗೂ ಹಣ ನೀಡುವುದಿಲ್ಲ. ಅವರೇ ಹಣ ಬಂಡವಾಳ ಹಾಕಿ ಮಾಡಬೇಕು. ವಿಜಿಎಫ್ ಎಷ್ಟು ಪರ್ಸೆಂಟ್ ನೀಡುತ್ತೇವೆಂದು ಹೇಳಿದ್ದೇವೋ ಅಷ್ಟನ್ನೇ ನೀಡುತ್ತೇವೆ. ನಾವು ಅಂದಾಜು ಮಾಡಿರುವುದರಲ್ಲಿ ಶೇ.40 ರಷ್ಟು ಮಾತ್ರ ನೀಡುತ್ತೇವೆ. ಅದರ ಮೇಲೆ ನಾವು ನೀಡುವುದಿಲ್ಲ. ಮೆಟ್ರೋಗೆ ತಗುಲುವ ವೆಚ್ಚ ಪರಿಶೀಲಿಸಿದೆ. ಮುಂಬೈನಲ್ಲಿ ಆಗುತ್ತಿರುವ ವೆಚ್ಚದ ಮಾಹಿತಿ ತರಿಸಿಕೊಂಡಿದ್ದೇನೆ. ಅಲ್ಲಿ ಪ್ರತಿ ಕಿ.ಮೀ.ಗೆ 1,200 ಕೋಟಿ ರೂ. ಖರ್ಚಾಗುತ್ತಿದೆಯೆಂದರು.

# ಮೇಲ್ಸೇತುವೆ ಬಳಿ ಟ್ರಾಫಿಕ್ ಸಮಸ್ಯೆ ಸರಿಪಡಿಸಿ

### ರೈಲ್ವೆ, ಲೋಕೋಪಯೋಗಿ ಇಲಾಖೆ ಪರಿಶೀಲನೆಗೆ ಸುರೇಶ್ ಕುಮಾರ್ ಒತ್ತಾಯ

• ಪ್ರಜೋದಯ ವರದಿ

**ಹಾಸನ:** ನಗರದ ಎನ್.ಆರ್.ವೃತ್ತದ ಮೇಲ್ಸೇತುವೆ ಬಳಿ ಸೂಕ್ತ ಸ್ಥಳಾವಕಾಶ ವಿಲ್ಲದೆ ಸಂಚಾರ ದಟ್ಟಣೆಯಿಂದ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ. ಈ ಬಗ್ಗೆ ರೈಲ್ವೆ ಮತ್ತು ಲೋಕೋ ಪಯೋಗಿ ಇಲಾಖೆ ಪರಿಶೀಲನೆ ನಡೆಸಿ ಸಮಸ್ಯೆ ಸರಿಪಡಿಸಬೇಕೆಂದು ನಗರ ಸಭೆ ಮಾಜಿ ಸದಸ್ಯ ಹೆಚ್.ಎಂ.ಸುರೇಶ್ ಕುಮಾರ್ ಅವರು ಒತ್ತಾಯಿಸಿದರು.




ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅವೈಜ್ಞಾನಿಕ ರಸ್ತೆ ವಿನ್ಯಾಸ ಹಾಗು ಅಸಮರ್ಪಕ ಹೊಂದಾಣಿಕೆಯಿಂದಾಗಿ ವಾಹನ ಸವಾರರು ಮತ್ತು ಪಾದಚಾರಿಗಳು ನಿರಂತರ ಅಪಾಯದ ಮಧ್ಯೆ ಸಂಚರಿ ಸಬೇಕಿದೆ. ಮೇಲ್ಸೇತುವೆ ಇಳಿಜಾರಿನ ತುದಿ ಮತ್ತು ಟ್ರಾಫಿಕ್ ಸಿಗ್ನಲ್ ನಡುವಿನ ಅಂತರ ಕಡಿಮೆ ಇದೆ. ಕೇವಲ 30 ಸೆಕೆಂಡ್‌ಗಳಲ್ಲಿ ಹೆಚ್ಚು ವಾಹನಗಳು ಹಾದು ಹೋಗುವುದು ಕಷ್ಟವಾಗಿದೆ. ಮೇಲ್ಸೇತುವೆಯಿಂದ ಇಳಿಯುವ ವಾಹನಗಳು ಏಕಾಏಕಿ ಬ್ರೇಕ್ ಹಾಕಿದರೆ ಕಷ್ಟವಾಗಲಿದೆ. ಈ ಬಗ್ಗೆ ಸ್ಥಳೀಯ ಜನಪ್ರತಿನಿಧಿಗಳು ಸೇರಿ ಎಲ್ಲರೂ ಮನವಿ ಮಾಡಿದರೂ, ಸಂಬಂಧಪಟ್ಟ ಅಧಿಕಾರಿಗಳು ಬಂದು ಪರಿಶೀಲನೆ ನಡೆಸಿಲ್ಲ ಎಂದು ಆರೋಪಿಸಿದರು.

ಸಾರ್ವಜನಿಕರ ಸುರಕ್ಷತೆ ಹಿತ ದೃಷ್ಟಿಯಿಂದ ಸಂಬಂಧಪಟ್ಟ ಇಲಾಖೆಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಸರ್ವಿಸ್ ರಸ್ತೆ, ಮುಖ್ಯ ರಸ್ತೆಯ ಮರು ಹೊಂದಾಣಿಕೆ, ಟೋವಾಲ್ ವಿನ್ಯಾಸ ಪರಿಷ್ಕರಣೆ, ಸಂಚಾರ ಸಿಗ್ನಲ್ ಸ್ಥಳ ಬದಲಾವಣೆ, ರಸ್ತೆ ವಿನ್ಯಾಸ ಸುಧಾರಣೆ, ಮುನ್ನೆಚ್ಚರಿಕೆ ಸೂಚನಾ ಫಲಕಗಳ ಅಳವಡಿಕೆ ಹಾಗು ಗರಿಷ್ಠ ಸಮಯದಲ್ಲಿ ಸಂಚಾರ ಸಿಬ್ಬಂದಿ ನಿಯೋಜನೆ ಮಾಡಬೇಕು. ಈ ಬಗ್ಗೆ ಮುಂದಿನ 15 ದಿನದಲ್ಲಿ ಸ್ಪಂದಿಸದಿ ದ್ದರೆ ಮುಂದಿನ ಹೋರಾಟಕ್ಕೆ ಅಣಿ ಯಾಗುವುದಾಗಿ ಎಚ್ಚರಿಕೆ ನೀಡಿದರು.

ಎನ್.ಆರ್.ವೃತ್ತದಲ್ಲಿ ಸರ್ವಿಸ್ ರಸ್ತೆ ಮತ್ತು ಮುಖ್ಯ ರಸ್ತೆಗಳ ಸಂಗಮ ಸರಿಯಾದ ರೀತಿಯಲ್ಲಿ ಹೊಂದಾಣಿಕೆಯಾಗಿಲ್ಲ. ಸಂಗಮದ ಬಳಿ ನಿರ್ಮಿಸಲಾಗಿರುವ ಟೋ ವಾಲ್ ಅಗತ್ಯಕ್ಕಿಂತ ಬಹಳ ಮುಂದಕ್ಕೆ ನಿರ್ಮಾಣಗೊಂಡಿರುವುದರಿಂದ ರಸ್ತೆ ಅಗಲ ಕುಗ್ಗುತ್ತಿದೆ. ಅದರಿಂದ ವಾಹನ ಸವಾರರು ತಕ್ಷಣ ಹಾಗು ಅಪಾಯಕಾರಿ ತಿರುವು ಮತ್ತು ಲೇನ್ ಬದಲಾ ವಣೆ ಮಾಡುವಾಗ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚಾಗಿದೆ ಎಂದು ದೂರಿದರು.

ರಸ್ತೆ ಸುರಕ್ಷತಾ ತಜ್ಞರ ಪ್ರಕಾರ, ಭಾರತೀಯ ರಸ್ತೆ ಕಾಂಗ್ರೆಸ್ ಮಾರ್ಗ ಸೂಚಿಗಳಂತೆ ನಗರ ರಸ್ತೆಯಲ್ಲಿ 50 60 ಕಿ.ಮೀ ವೇಗಕ್ಕೆ ಕನಿಷ್ಠ 60 ರಿಂದ 90 ಮೀಟರ್ ನಿಲ್ಲುವ ದೃಶ್ಯ ದೂರ ಕಡ್ಡಾಯ. ಜೊತೆಗೆ ಸಿಗ್ನಲ್ ಬಳಿ ವಾಹನ ಸಾಲ ನಿಲ್ಲಿಸಲು ಸಮರ್ಪಕ ಜಾಗ ಒದಗಿಸಬೇಕು. ಹೆಚ್ಚಿನ ಸಂಚಾರವಿರುವ ನಗರ ಜಂಕ್ಷನ್‌ಗಳಲ್ಲಿ ಸಾಮಾನ್ಯವಾಗಿ 150 ರಿಂದ 200 ಮೀಟರ್‌ವರೆಗೆ ವಾಹನ ಸಾಲಿಗೆ ಜಾಗ ಇರಬೇಕು. ಎನ್.ಆರ್.ವೃತ್ತದಲ್ಲಿ ಈ ನಿಯಮ ಪಾಲನೆಯಾಗುತ್ತಿಲ್ಲವೆಂದರು.

ಹೆಚ್.ಡಿ.ದೀಪಕ್‌ಜೈನ್, ಎಸ್.ಡಿ. ಚಂದ್ರು, ಪ್ರೀತಿವರ್ಧನ್, ಗುರುಪ್ರಸಾದ್, ಪ್ರಸನ್ನಕುಮಾರ್ ಇದ್ದರು.

## ಆಲೂರು ತಾಲ್ಲೂಕು ಕಚೇರಿಗೆ ಹುಸಿ ಬಾಂಬ್ ಬೆದರಿಕೆ

» ಮೊದಲನೇ ಪುಟದಿಂದ

ದ ಸುದೀರ್ಘ ತಪಾಸಣೆ ನಡೆಸಿದರು. ಪರಿಶೀಲನೆ ವೇಳೆ ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗಲಿಲ್ಲವೆಂದು ಪೊಲೀಸರು ಸ್ಪಷ್ಟಪಡಿಸಿದರು.

ಮಾಹಿತಿ ತಿಳಿದ ತಕ್ಷಣ ತಾಲ್ಲೂಕು ಕಚೇರಿಗೆ ಶಾಸಕ ಸಿಮೆಂಟ್ ಮಂಜು ಅವರು ಭೇಟಿ ನೀಡಿ, ತಹಶೀಲ್ದಾರ್ ಹಾಗು ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಈ ಕುರಿತು ತಹಶೀಲ್ದಾರ್ ಮಲ್ಲಿಕಾರ್ಜುನ ಅವರು ಮಾತನಾಡಿ, ನಮ್ಮ ಅಧಿಕೃತ ಇ-ಮೇಲ್‌ಗೆ ಬೆಳಗಿನ ಜಾವ ಸಂದೇಶ ಬಂದಿದ್ದು, ಸಿಬ್ಬಂದಿ ಮಾಹಿತಿ ನೀಡಿದ ತಕ್ಷಣ ಪೊಲೀಸರ ಗಮನಕ್ಕೆ ತಂದು ತಪಾಸಣೆ ನಡೆಸಲಾಗಿದೆ. ಇದು ಹುಸಿ ಬಾಂಬ್ ಬೆದರಿಕೆ ಎಂಬುದು ದೃಢಪಟ್ಟಿದೆ. ಈ ಹಿಂದೆ ಹಾಸನದ ಜಿಲ್ಲಾಧಿಕಾರಿ ಕಚೇರಿ ಸೇರಿ ರಾಜ್ಯದ ಹಲವು ಕಚೇರಿಗಳಿಗೆ ಸಹ ಇದೇ ರೀತಿಯ ಸಂದೇಶಗಳು ಬಂದಿವೆ. ಈ ಇ-ಮೇಲ್ ತಮಿಳುನಾಡಿನ ಡಿಐಜಿ ಸೇರಿ ಇತರರಿಗೂ ವರ್ಗಾವಣೆ ಆಗಿದ್ದು, ತಮಿಳುನಾಡಿನ ಕನ್ಯಾಕುಮಾರಿಯಲ್ಲಿಯೂ ಆಲೂರು ತಾಲ್ಲೂಕು ಇರುವುದರಿಂದ ಅಲ್ಲಿಗೂ ಮಾಹಿತಿ ನೀಡಲಾಗಿದೆ. ಇದೀಗ ಯಾವುದೇ ಆತಂಕವಿಲ್ಲದೆ ಎಲ್ಲರೂ ಕರ್ತವ್ಯ ನಿರ್ವಹಿ ಸುತ್ತಿದ್ದಾರೆಂದು ತಿಳಿಸಿದರು. ಸಕಲೇಶಪುರ ಡಿವೈಎಸ್‌ಪಿ, ಆಲೂರು ವೃತ್ತ ನಿರೀಕ್ಷಕ ಮೋಹನ್ ರೆಡ್ಡಿ ಸೇರಿ ಇತರೆ ಪೊಲೀಸ್ ಅಧಿಕಾರಿಗಳು ಹಾಜರಿದ್ದರು.

**ಡಿ.15ರಂದು ಡಿಸಿ ಕಚೇರಿಗೂ ಬೆದರಿಕೆ**

ಡಿ.15ರಂದು ಜಿಲ್ಲಾಧಿಕಾರಿ ಕಚೇರಿಗೂ ಬಾಂಬ್ ಇರುವ ಬಗ್ಗೆ ಸುಳ್ಳು ಬೆದರಿಕೆ ಸಂದೇಶ ಬಂದಿತ್ತು. ಆ ಸಂದರ್ಭದಲ್ಲೂ ಬಾಂಬ್ ನಿಷ್ಕ್ರಿಯ ದಳದಿಂದ ಪರಿಶೀಲನೆ ನಡೆಸಿದ ಬಳಿಕ ಅದು ಹುಸಿ ಬೆದರಿಕೆ ಎಂಬುದು ತಿಳಿದು ಬಂದಿತ್ತು. ಸರ್ಕಾರಿ ಕಚೇರಿಗಳಿಗೆ ಪ್ರತಿದಿನ ಸಾವಿರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸುತ್ತಿದ್ದು, ಸಾಕಷ್ಟು ಸಂಖ್ಯೆಯ ನೌಕರರು ಕಾರ್ಯನಿರ್ವಹಿಸುತ್ತಿರುವ ಹಿನ್ನಲೆ ಯಲ್ಲಿ ಇಂತಹ ಬೆದರಿಕೆ ಸಂದೇಶಗಳು ಆತಂಕ ಸೃಷ್ಟಿಸುತ್ತಿವೆ. ಹುಸಿ ಬಾಂಬ್ ಬೆದರಿಕೆ ನೀಡುವವರನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕೆಂಬುದು ಸಾರ್ವಜನಿಕರ ಒತ್ತಾಯ.

### ಬೇಲೂರು ತಹಶೀಲ್ದಾರ್ ಕಚೇರಿಯಲ್ಲಿ ಜನಸ್ಪಂದನ ಸಭೆ

# ನಾಗರಿಕರ ಸಮಸ್ಯೆಗಳಿಗೆ ತ್ವರಿತ ಪರಿಹಾರ

• ಪ್ರಜೋದಯ ವರದಿ

**ಬೇಲೂರು:** ಸಾಮಾನ್ಯ ನಾಗರಿಕರ ಸಮಸ್ಯೆಗಳಿಗೆ ತ್ವರಿತ ಪರಿಹಾರ ಒದಗಿಸುವ ಉದ್ದೇಶದಿಂದ ತಹಶೀಲ್ದಾರ್ ಕಚೇರಿಯಲ್ಲಿ ಜನಸ್ಪಂದನ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸ ಲಾಯಿತು.

ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ಭೂಮಿ ದಾಖಲೆ, ಖಾತೆ ವರ್ಗಾವಣೆ, ಪಹಣಿ ತಿದ್ದುಪಡಿ, ನಿವೇಶನ ಸಮಸ್ಯೆ, ವೃದ್ಧಾಪ್ಯ/ವಿಕಲಚೇತನ ಪಿಂಚಣಿ, ಪಡಿತರ ಚೀಟಿ, ಮನೆ ನಿವೇಶನ ಸೇರಿ ಹಲವು ಅಹವಾಲುಗಳನ್ನು ಸಲ್ಲಿಸಿದರು. ತಹಶೀಲ್ದಾರ್ ಶ್ರೀಧರ್ ಕಂಕನವಾಡಿ ಅವರು ಸಾರ್ವಜನಿಕರ ಅಹವಾಲುಗಳನ್ನು ಗಮನವಿಟ್ಟು ಆಲಿಸಿ, ಸಂಬಂಧಿಸಿದ ಅಧಿಕಾರಿಗಳಿಗೆ ತಕ್ಷಣವೇ ಪರಿಶೀಲನೆ ನಡೆಸಿ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಕೆಲವು ಅರ್ಜಿಗಳಿಗೆ ಸ್ಥಳದಲ್ಲೇ ಪರಿಹಾರ ಒದಗಿಸಲಾಯಿತು. ಉಳಿದ ಸಮಸ್ಯೆಗಳ ಕುರಿತು ನಿಗದಿತ ಅವಧಿಯಲ್ಲಿ ಪರಿಹಾರ ನೀಡುವುದಾಗಿ ಭರವಸೆ ನೀಡಲಾಯಿತು.

ತಹಶೀಲ್ದಾರ್ ಶ್ರೀಧರ್ ಕಂಕಣವಾಡಿ ಅವರು ಮಾತನಾಡಿ, ಜನಸ್ಪಂದನ ಕಾರ್ಯಕ್ರಮದಲ್ಲಿ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ನೇರವಾಗಿ ಆಡಳಿತದ ಗಮನಕ್ಕೆ ತರುವ ಮಹತ್ವದ ವೇದಿಕೆಯಾಗಿದೆ. ಜನರು ಕಚೇರಿಗಳಿಗೆ ಸುತ್ತಾಡುವ ಪರಿಸ್ಥಿತಿ ಬರಬಾರದೆಂಬ ಉದ್ದೇಶದಿಂದ ಸರ್ಕಾರ ಕಾರ್ಯಕ್ರಮ ಜಾರಿಗೆ ತಂದಿದೆ. ಪ್ರತಿಯೊಬ್ಬ ನಾಗರಿಕರ ಸಮಸ್ಯೆಯನ್ನು ಗಮನ ವಿಟ್ಟು ಆಲಿಸಿ, ಕಾನೂನು ಹಾಗೂ ನಿಯಮಗಳ ಅಡಿಯಲ್ಲಿ ತ್ವರಿತ ಮತ್ತು ನ್ಯಾಯಸಮ್ಮತ ಪರಿಹಾರ ನೀಡುವುದು ನಮ್ಮ ಕರ್ತವ್ಯವಾಗಿದೆ ಎಂದರು.




ಸಾರ್ವಜನಿಕರು ಮಧ್ಯವರ್ತಿಗಳ ಮೊರೆ ಹೋಗದೆ ನೇರವಾಗಿ ಕಚೇರಿಯನ್ನು ಸಂಪರ್ಕಿಸಬೇಕು. ಸರ್ಕಾರದ ಯೋಜನೆಗಳ ಸದುಪಯೋಗವನ್ನು ಪ್ರತಿಯೊಬ್ಬ ಅರ್ಹ ವ್ಯಕ್ತಿಯೂ ಪಡೆಯಬೇಕು. ಆಡಳಿತ ಪಾರದರ್ಶಕತೆ ಮತ್ತು ಜನರೊಂದಿಗೆ ನೇರ ಸಂವಾದವೇ ಉತ್ತಮ ಆಡಳಿತಕ್ಕೆ ದಾರಿ ಎಂದು ಹೇಳಿದರು.

ಜನಸ್ಪಂದನ ಕಾರ್ಯಕ್ರಮದಿಂದ ಕಚೇರಿ-ಜನರ ನಡುವಿನ ಅಂತರ ಕಡಿಮೆಯಾಗಿದ್ದು, ಆಡಳಿತ ವ್ಯವಸ್ಥೆಯ ಮೇಲಿನ ವಿಶ್ವಾಸ ಮತ್ತಷ್ಟು ಬಲವಾಗಿದೆ ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದರು.

ಬಿಇಒ ಭಾಗ್ಯಮ್ಮ, ಪಿಎಸ್‌ಐ ಎಸ್.ಜಿ.ಪಾಟೀಲ್, ರೈತ ಮುಖಂಡ ಸ್ವಾಮಿಗೌಡ, ಬಸವರಾಜು, ಪುಟ್ಟಸ್ವಾಮಿ ಇಲಾಖೆ ಅಧಿಕಾರಿಗಳು ಇದ್ದರು.

## ಮಾದರ ಮಹಾಸಭಾ ಸದಸ್ಯತ್ವ ಪಡೆಯಲು ಸಲಹೆ

» ಮೊದಲನೇ ಪುಟದಿಂದ

ಸದಸ್ಯತ್ವ ಮಾಡಿಕೊಳ್ಳಬೇಕು. ಬೇರೆ ಯಾರಿಗೂ ಹಣ ನೀಡಿ ಮೋಸ ಹೋಗಬಾರದು. ಆನ್‌ಲೈನ್‌ನಲ್ಲಿ ನೋಂದಣಿಯಾಗಿ ಹಣ ಪಾವತಿ ಮಾಡಿದ ತಕ್ಷಣವೇ ಐಡಿ ಕಾರ್ಡ್ ಬರಲಿದ್ದು, ಅಲ್ಲಿಯೇ ಡೌನ್‌ಲೋಡ್ ಮಾಡಿಕೊಳ್ಳಬೇಕೆಂದರು.

ಮಹಾಸಭಾ ಜಿಲ್ಲಾಧ್ಯಕ್ಷ ವಿಜಯ್ ಕುಮಾರ್ ಅವರು ಮಾತನಾಡಿ, ಜಿಲ್ಲಾ-ತಾಲ್ಲೂಕು ಮಟ್ಟದ ಸಮಿತಿ ರಚನೆಯಾಗಿದ್ದು, ಒಂದು ವಿಧಾನ ಸಭಾ ಕ್ಷೇತ್ರದಲ್ಲಿ ತಲಾ 2 ಸಾವಿರ ಜನರ ನೋಂದಣಿ ಮಾಡಿಸಬೇಕು. ಸಮುದಾಯದ 1 ಕುಟುಂಬಕ್ಕೆ ಒಬ್ಬರಂತೆ 500 ರೂ. ನೀಡಿ ಸದಸ್ಯತ್ವ ಪಡೆಯಬೇಕು. ಮಾದರ ಮಹಾಸಭಾವು ಅನೇಕ ಧ್ಯೇಯೋದ್ದೇಶ ಹೊಂದಿದ್ದು, ಸಮುದಾಯದ ಪರವಾಗಿ ಅದರಲ್ಲೂ ವಿದ್ಯಾರ್ಥಿಗಳ ಕಲ್ಯಾಣಕ್ಕೆ ಶ್ರಮಿಸಲಿದ್ದು, ಯುವ ಪೀಳಿಗೆಯನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡಿ, ಸದೃಢ ಸಮಾಜ ಕಟ್ಟುವ ಕೆಲಸವನ್ನು ಜಿಲ್ಲೆಯಲ್ಲಿ ರಾಜ್ಯ ನಾಯಕರ ನಿರ್ದೇಶನದಂತೆ ಮಾಡಬೇಕೆಂದರು.

ಮಾದರ ಮಹಾಸಭಾ ಪಾರದರ್ಶಕವಾಗಿ ಕೆಲಸ ಮಾಡಲಿದ್ದು, ಸಂಘದ ಆರ್ಥಿಕ ಸೇರಿ ಎಲ್ಲಾ ಕಾರ್ಯಗಳು ವೆಬ್‌ಸೈಟ್‌ನಲ್ಲಿ ಲಭ್ಯವಿದ್ದು, ಸರ್ವರೂ ವೀಕ್ಷಣೆ ಮಾಡಬಹುದು ಹಾಗು ಏನಾದರೂ ಗೊಂದಲಗಳಿದ್ದರೆ ಅಥವಾ ಆಕ್ಷೇಪಗಳಿದ್ದರೆ ನೇರವಾಗಿ ಸಂಪರ್ಕಿಸಿ ಪರಿಹರಿಸಿಕೊಳ್ಳಬಹುದು. ವಿದ್ಯಾರ್ಥಿಗಳು, ಯುವ ಮಿತ್ರರು ಸಂಘಟನೆ ಸದುಪಯೋಗ ಪಡಿಸಿಕೊಳ್ಳಬೇಕೆಂದು ಮನವಿ ಮಾಡಿದರು.

ತಾಲ್ಲೂಕು-ಜಿಲ್ಲಾ ಮಟ್ಟಕ್ಕೆ ಪದಾಧಿಕಾರಿಗಳನ್ನು ಆಯ್ಕೆ ಮಾಡಿ ನೋಂದಣಿ ಅಭಿಯಾನವನ್ನು ರಾಜ್ಯ ಸಮಿತಿ ಸೂಚಿಸಿದಂತೆ ಸ್ಥಳದಲ್ಲೇ 500ಕ್ಕೂ ಸದಸ್ಯರು ನೋಂದಣಿ ಪಡೆದರು. ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮಂಜುನಾಥ್, ದೇವರಾಜ್, ಆಲೂರು ಹೇಮಂತ್, ಕೆಡಿಎಸ್‌ಎಸ್ ಜಿಲ್ಲಾ ಸಂಚಾಲಕ ವಿರೂಪಾಕ್ಷಿಪುರ ಪ್ರಕಾಶ್, ಸಫಾಯಿ ಕರ್ಮಚಾರ ಆಯೋಗದ ಜಿಲ್ಲಾ ಉಸ್ತುವಾರಿ ಶ್ರೀನಿವಾಸ್ ಚನ್ನರಾಯಪಟ್ಟಣ, ಬೈರೇಶ್, ಕುಮಾರಸ್ವಾಮಿ ದೊಡ್ಡಪುರ, ಮಹಿಳಾ ಮುಖಂಡರಾದ ವಸಂತಮ್ಮ ಇತರರಿದ್ದರು.

# ಸಾಮರ್ಥ್ಯ ಸಾಧಿಸಲು ಕಲಿಕಾ ಹಬ್ಬ ವೇದಿಕೆ: ಬಾಲಕೃಷ್ಣ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯವನ್ನು ಸಾಧಿಸಿಕೊಳ್ಳಲು ಹಾಗೂ ಪ್ರತಿಭೆಯನ್ನು ಪ್ರದರ್ಶಿಸಲು ಕಲಿಕಾ ಹಬ್ಬ ಮುಖ್ಯ ವೇದಿಕೆ ಯಾಗಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಹೇಳಿದರು.

ತಾಲ್ಲೂಕಿನ ಅಕ್ಕನಹಳ್ಳಿ ಕೂಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಆಯೋಜಿಸಿದ್ದ ಎಫ್‌ಎಲ್‌ಎನ್ ಕಲಿಕಾ ಹಬ್ಬ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಭೆಗಳನ್ನು ಮುಖ್ಯ ಭೂಮಿಕೆಗೆ ತರಲು ಇಂತಹ ಕಾರ್ಯಕ್ರಮ ಅಗತ್ಯ. ಶಿಕ್ಷಣದ ಜೊತೆಗೆ ಕ್ರೀಡೆ, ಸಾಹಿತ್ಯ ಹಾಗೂ ಕೃಷಿಗೆ ಸಂಬಂಧಪಟ್ಟಂತಹ ವಿಷಯಗಳಿಗೂ ಹೆಚ್ಚಿನ ಆದ್ಯತೆ ನೀಡಬೇಕು. ಇನ್ನೂ ವಿದ್ಯಾರ್ಥಿಗಳು ಓದುವುದರ ಜೊತೆಗೆ ಬರವಣಿಗೆಗೆ ಹೆಚ್ಚಿನ ಆದ್ಯತೆ ನೀಡಿದ್ದಲ್ಲಿ ಪದ ಅಥವಾ ವಾಕ್ಯಗಳು ಪರಿಪೂರ್ಣವಾಗಿ ನೆನಪಿನಲ್ಲಿ ಉಳಿಯಲು ಸಾಧ್ಯವಾಗಲಿದೆ. ಗಟ್ಟಿತನದ ಓದು ಹಾಗೂ ಕೈಬರಹ ಅತಿಮುಖ್ಯವೆಂದರು.

ಸಾಲ ಮಾಡಿ ಮಕ್ಕಳಿಗೆ ವಿದ್ಯೆ ಕೊಡಿಸುವುದು ಬೇಡ. ಅದರಿಂದ ಕುಟುಂಬಗಳ ಮೇಲೆ ಆರ್ಥಿಕ ಹೊರೆ ಬೀಳಲಿದೆ. ಸರ್ಕಾರವು ಪುಸ್ತಕ, ಸಮವಸ್ತ್ರ, ಅನ್ನಭಾಗ್ಯ, ಕ್ಷೀರಭಾಗ್ಯ ಸೇರಿ ವಿವಿಧ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಉಚಿತವಾಗಿ ಶಿಕ್ಷಣ ನೀಡುತ್ತಿದೆ. ಸರ್ಕಾರಿ ಶಾಲೆ ಗಳಲ್ಲಿಯೇ ಓದಿದಂತಹ ಅದೆಷ್ಟೋ ಮಹನೀಯರು ರಾಷ್ಟ್ರೀಯ ಹಾಗೂ ಅಂತರ ರಾಷ್ಟ್ರೀಯ ಮಟ್ಟದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡಿರುವುದು ಶ್ಲಾಘನೀಯ ಸಂಗತಿ ಎಂದರು.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ರಾಜ್ಯದ ಮುಖ್ಯಮಂತ್ರಿಯಾಗಿದ್ದ ವೇಳೆ ಕೆಪಿಎಸ್ ವ್ಯವಸ್ಥೆ ಜಾರಿಗೊಳಿಸಿದ್ದು, ತಾಲ್ಲೂಕಿನಲ್ಲಿ ಮೊದಲ ಬಾರಿಗೆ ನುಗ್ಗೇಹಳ್ಳಿಯಲ್ಲಿ ತೆರಲಾ ಯಿತು. ತಾಲ್ಲೂಕಿನ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾ ಗುತ್ತಿದೆ. ಶಾಲೆಯಲ್ಲಿ ಸಿಗುವ ಮೌಲ್ಯಯುತ ಶಿಕ್ಷಣದ ಜೊತೆಗೆ ಮನೆಯಲ್ಲಿ ಸಂಸ್ಕಾರ ಕಲಿಸುವುದು ಪಾಲಕರ ಜವಾಬ್ದಾರಿಯಾಗಿದೆ. ಮಕ್ಕಳ ಭವಿಷ್ಯ ರೂಪಿಸುವಲ್ಲಿ ಅಮ್ಮಂದಿರ ಪಾತ್ರ ಬಹುಮುಖ್ಯ. ಮಕ್ಕಳ ದೈನಂದಿನ ಚಟುವಟಿಕೆಯ ಮೇಲೆ ಪಾಲಕರು ಗಮನಹರಿಸು ವುದು ಅಗತ್ಯವಿದೆ. ಟಿವಿ ವೀಕ್ಷಣೆ ಹಾಗೂ ಮೊಬೈಲ್ ಬಳಕೆಯಿಂದ ಮಕ್ಕಳನ್ನು ದೂರವಿಡಿ. ಇಲ್ಲವಾದಲ್ಲಿ ಮಕ್ಕಳು ಕೈತಪ್ಪಿ ಹೋದರೆ ಮತ್ತೆ ಸರಿ ಹಂತಕ್ಕೆ ತರುವುದು ಬಹಳ ಕಷ್ಟ ಎಂದು ಎಚ್ಚರಿಸಿದರು.




ಈ ಶಾಲೆಗೆ ಶೌಚಾಲಯ ಅಗತ್ಯವಿದ್ದು ಏಪ್ರಿಲ್ ತಿಂಗಳಲ್ಲಿ ಅನುದಾನ ಕಲ್ಪಿಸಿ ಕಾಮಗಾರಿಗೆ ಚಾಲನೆ ನೀಡಲಾಗುವುದು. ಪ್ರತಿ ಗ್ರಾಮ ಪಂಚಾಯಿತಿ ವತಿಯಿಂದ ಆಯಾ ವ್ಯಾಪ್ತಿಯ ತಲಾ 2 ಶಾಲಾ ಕಟ್ಟಡಗಳನ್ನು ದುರಸ್ತಿ ಕಾರ್ಯ ಮಾಡಲು ಆದ್ಯತೆ ನೀಡಲಾಗುವುದು. ಈ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಶೀಘ್ರದಿಂದಲೇ ಕಾರ್ಯರೂಪಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

ವಿವಿಧ ಸ್ಪರ್ಧೆಗಳಲ್ಲಿ ಗೆಲುವು ಸಾಧಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು. ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ಎಪಿಎಂಸಿ ಮಾಜಿ ಅಧ್ಯಕ್ಷರಾದ ಬಿ.ಸಿ. ದೊರೆಸ್ವಾಮಿ, ವಳಗೇರಹಳ್ಳಿ ಮಂಜೇಗೌಡ, ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಸಂಪತ್ ಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಉಮೇಶ್, ಮಾಜಿ ಉಪಾಧ್ಯಕ್ಷ ಪ್ರಕಾಶ್, ಸದಸ್ಯೆ ಸೌಭಾಗ್ಯಮ್ಮ, ಅಕ್ಕನಹಳ್ಳಿ ಸೊಸೈಟಿ ಅಧ್ಯಕ್ಷ ಮಧು, ನುಗ್ಗೇಹಳ್ಳಿ ಸೊಸೈಟಿ ಅಧ್ಯಕ್ಷ ವಿಕ್ಟರ್, ಎಸ್‌ಡಿಎಂಸಿ ಅಧ್ಯಕ್ಷ ಶೇಖರ್, ಸಿಆರ್‌ಪಿ ಸಂಘದ ಅಧ್ಯಕ್ಷ ಹೆಚ್.ಟಿ.ಮಂಜೇಗೌಡ, ಸಿಆರ್‌ಪಿಗಳಾದ ಅಶೋಕ ಸುಂದರನ್, ಮಂಜೇಗೌಡ, ಪುಟ್ಟರಾಜು, ಮುಖ್ಯಶಿಕ್ಷಕ ರಾಹುಲ್ ಗೋವರ್ಧನ್, ಪ್ರಮುಖರಾದ ಲಕ್ಷ್ಮಣ್, ಪ್ರಭಾಕರ್, ಯೋಗೇಶ್ ಇದ್ದರು.

# ನಾಡಿನ ಸಂಸ್ಕೃತಿ ಪ್ರತಿಬಿಂಬಿಸುವ ಆಳ್ವಾಸ್ ವೈಭವ

• ಪ್ರಜೋದಯ ವರದಿ

**ಹೊಳೆನರಸೀಪುರ:** ಆಳ್ವಾಸ್ ಸಂಸ್ಥೆಯು ನಡೆಸುವ ಸಾಂಸ್ಕೃತಿಕ ಕಾರ್ಯಕ್ರಮಗಳು ನಾಡಿನ ಸಂಸ್ಕೃತಿ, ಇತಿಹಾಸ ಹಾಗು ವೈಭವವನ್ನು ಭವಿಷ್ಯದ ಪೀಳಿಗೆಗೆ ಪರಿಚಯ ಮಾಡಿಕೊಡುವಲ್ಲಿ ಮಹತ್ವದ ಸ್ಥಾನ ವಹಿಸುತ್ತದೆಂದು ಸಂಸದ ಶ್ರೇಯಸ್ ಪಟೇಲ್ ಅವರು ತಿಳಿಸಿದರು.

ಪಟ್ಟಣದ ಬಯಲು ರಂಗ ಮಂದಿರ ಆವರಣದಲ್ಲಿ ನಡೆದ ಆಳ್ವಾಸ್ ಸಾಂಸ್ಕೃತಿಕ ವೈಭವಕ್ಕೆ ಚಾಲನೆ ನೀಡಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಜೊತೆಗೆ ಸಾಂಸ್ಕೃತಿಕ ಚಟು ವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರ ಮೂಲಕ ನೆಮ್ಮದಿ ಮತ್ತು ಸಂತೋಷ ಕಾಣಬೇಕೆಂದರು.

ಶೈಕ್ಷಣಿಕ ಕ್ಷೇತ್ರದ ಪ್ರಗತಿ ಜೊತೆಗೆ ಸಾಂಸ್ಕೃತಿಕ ಜಗತ್ತಿನಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಲು ಅವಕಾಶ ಸಿಗುವುದು ಅಪರೂಪ. ಪ್ರತಿಭೆ ನೋಡಿ ಆನಂದಿಸುವ ಪ್ರೇಕ್ಷಕರು ತಮಗೆ ಆಶೀರ್ವಾದ ಮಾಡುವುದೇ ನೆಮ್ಮದಿ ಬದುಕಿಗೆ ಶ್ರೀರಕ್ಷೆಯಾಗಲಿದೆ ಎಂದು ನುಡಿದರು.

ಆಳ್ವಾಸ್ ಸಂಸ್ಥೆ ಮುಖ್ಯಸ್ಥ ಮೋಹನ್ ಆಳ್ವ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ತಾಲ್ಲೂಕಿನಲ್ಲಿ ನಮ್ಮ ಸಂಸ್ಥೆಯಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲು ಹಲವಾರು ವರ್ಷಗಳಿಂದಲೂ ಪ್ರಯತ್ನ ಮಾಡಿ ವಿಫಲವಾಗಿದ್ದೇವು. ಅಂತಹ ಒಂದು ಅವಕಾಶ ಒದಗಿಸಿ ಕೊಟ್ಟಿರುವ ಶ್ರೇಯಸ್ ಪಟೇಲ್ ಅವರ ಸಹಕಾರಕ್ಕೆ ನಮ್ಮ ಸಂಸ್ಥೆ ಸದಾ ಋಣಿಯಾಗಿರು ತ್ತದೆಂದರು.



ಸಂಸದರು ಆರಂಭದಿಂದ ಈ ವರೆಗೆ ಸಂಸತ್ ಅಧಿವೇಶನದಲ್ಲಿ ಜಿಲ್ಲೆಯ ಸಮಗ್ರ ಅಭಿವೃದ್ಧಿ ಸೇರಿ ಹಲವು ಗುರುತರ ಸಮಸ್ಯೆ ಹಾಗು ಬೇಡಿಕೆ ಕುರಿತು ಸಂಬಂಧಪಟ್ಟವರ ಗಮನ ಸೆಳೆದು ಎಲ್ಲರಿಗೂ ಮಾದರಿ ಆಗಿದ್ದಾರೆಂದರು. ನಮ್ಮ ಹಾಗು ಪಕ್ಕದ ರಾಜ್ಯಗಳ ಸುಮಾರು 350ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರದರ್ಶನ ನೀಡಲಿದ್ದು, ಇಂತಹ ಐತಿಹಾಸಿಕಕಾರ್ಯಕ್ರಮದಲ್ಲಿ ಪೂರ್ಣ ಪ್ರಮಾಣದಲ್ಲಿ ತಾವು ಪಾಲ್ಗೊಳ್ಳುವುದರ ಮೂಲಕ ಸಾಂಸ್ಕೃತಿಕ ವೈಭವದ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಪ್ರಸನ್ನ ಕುಮಾರ್ ನಿರೂಪಿಸಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಟಿ.ಲಕ್ಷ್ಮಣ ಸ್ವಾಗತಿಸಿದರು.

# ಸಾಧಕರನ್ನು ಪರಿಚಯಿಸುತ್ತಿರುವ ಕಾರ್ಯ ಶ್ಲಾಘನೀಯ

• ಪ್ರಜೋದಯ ವರದಿ

**ಅರಕಲಗೂಡು:** ಜೋಡಿಗುಬ್ಬಿ ವಿಪ್ರವೃಂದ ನಡೆಸುತ್ತಿರುವ ಸಾಮಾಜಿಕ ಕಾರ್ಯಗಳು ಅನುಕರಣೀಯವಾಗಿದ್ದು ಇತರರಿಗೆ ಮಾದರಿಯಾಗಿದೆ ಎಂದು ಆರೋಗ್ಯ ಸಚಿವರ ವಿಶೇಷ ಕರ್ತವ್ಯಾಧಿಕಾರಿ ಡಾ||ಎ.ವಿ.ಪ್ರಸನ್ನ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಬೆಂಗಳೂರು ಬಬ್ಬೂರು ಕಮ್ಮೆ ಸೇವಾ ಸಮಿತಿ ಸಭಾಂಗಣದಲ್ಲಿ ನಡೆದ ಜೋಡಿಗುಬ್ಬಿ ವಿಪ್ರ ವೃಂದದ 13ನೇ ವಾರ್ಷಿಕ ಸಮ್ಮೇಳನದಲ್ಲಿ ಮಾತನಾಡಿದ ಅವರು, ಹಾಸನ ಜಿಲ್ಲೆಯ ಕುಗ್ರಾಮವೊಂದರ ಜನರು ಬೆಂಗಳೂರಿನಲ್ಲಿ ಸಂಘಟಿತರಾಗಿ ಸಮುದಾಯ ಹಾಗೂ ಗ್ರಾಮದ ಒಳಿತಿ ಗಾಗಿ ಸೇವಾ ಕಾರ್ಯ ಕೈಗೊಳ್ಳುವ ಜೊತೆಗೆ ವರ್ಷಕ್ಕೊಮ್ಮೆ ಸಮಾವೇಶ ಆಯೋಜಿಸಿ ಸಮುದಾಯದ ಎಲ್ಲರೂ ಒಗ್ಗೂಡುವಂತೆ ಮಾಡುತ್ತಿರುವುದಲ್ಲದೆ, ಸಾಧಕರನ್ನು ಗುರುತಿಸಿ ಸಮಾಜಕ್ಕೆ ಪರಿಚಯಿಸುತ್ತಿರುವ ಕಾರ್ಯ ಶ್ಲಾಘನೀಯ ಎಂದರು.

ವಿಪ್ರವೃಂದದ ಅಧ್ಯಕ್ಷ ಜಿ.ಎನ್. ರಾಮಚಂದ್ರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, 2011 ರಲ್ಲಿ ಪ್ರಾರಂಭವಾದ ನಮ್ಮ ಸಂಸ್ಥೆ ದಾನಿಗಳ ನೆರವಿನಿಂದ ನಿರಂತರವಾಗಿ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿದೆ. ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ವಿದ್ಯಾರ್ಥಿ ವೇತನ, ಪ್ರತಿಭಾ ಪುರಸ್ಕಾರ ನೀಡುತ್ತಿದ್ದು, 10 ವರ್ಷಗಳಲ್ಲಿ 150ಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ಶೈಕ್ಷಣಿಕ ಸಹಾಯ ಪಡೆದು ಬದುಕು ರೂಪಿಸಿ ಕೊಂಡಿದ್ದಾರೆ. ಜೋಡಿ ಗುಬ್ಬಿ ಗ್ರಾಮದಲ್ಲಿ ದೇವಾಲಯ ಅಭಿವೃದ್ಧಿ, ರಾಮ ಮಂದಿರ, 25 ಲಕ್ಷ ರೂ. ವೆಚ್ಚದಲ್ಲಿ ಅತಿಥಿ ಗೃಹ ನಿರ್ಮಾಣ, ಗ್ರಾಮೀಣ ಜನರಿಗೆ ಆರೋಗ್ಯ ಶಿಬಿರ, ಹೆಣ್ಣು ಮಕ್ಕಳ ಆರೋಗ್ಯರಕ್ಷಣೆ ಕುರಿತು ಕಾಳಜಿ ಮುಂತಾದ ಕಾರ್ಯಗಳನ್ನು ನಡೆಸುತ್ತಿದೆ. ಇನ್ನೂ ಹೆಚ್ಚಿನ ಸೇವಾ ಕಾರ್ಯ ಕೈಗೊಳ್ಳಲು ದಾನಿಗಳು ನೆರವು ನೀಡುವಂತೆ ಮನವಿ ಮಾಡಿದರು.



2026ರ ದಿನದರ್ಶಿಕೆ ಬಿಡುಗಡೆ ಮಾಡಿದ ನಿವೃತ್ತ ಡಾ||ಜಿ.ಎ.ಲತಾ ಅವರು ತಮ್ಮ ಶೈಕ್ಷಣಿಕ ಅನುಭವಗಳನ್ನು ಹಂಚಿಕೊಂಡುವೈದ್ಯಕೀಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು 1ಲಕ್ಷ ರೂ.ಗಳನ್ನು ವಿಪ್ರವೃಂದಕ್ಕೆ ದೇಣಿಗೆಯಾಗಿ ನೀಡಿದರು.

ಸ್ಮರಣ ಸಂಚಿಕೆ ಬಿಡುಗಡೆ ಮಾಡಿದ ಟೆಲಿಕಾಂ ಸಂಸ್ಥೆಯ ನಿವೃತ್ತ ಡೈರೆಕ್ಟರ್ ಜನರಲ್ ಜಿ.ಆರ್.ರವಿ ದೂರ ಸಂಪರ್ಕ ಕ್ಷೇತ್ರದ ಅಗಾದ ಬೆಳವಣಿಗೆ ಹಾಗೂ ತಮ್ಮ ವೃತ್ತಿ ಬದುಕಿನ ಅನುಭವಗಳನ್ನು ಹಂಚಿಕೊಂಡರು.

ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ವಿದ್ಯಾರ್ಥಿ ವೇತನ ವಿತರಣೆ, ವಿವಿಧ ಕ್ಷೇತ್ರದ ಸಾಧಕರು, ಹಿರಿಯ ದಂಪತಿಗಳನ್ನು ಸನ್ಮಾನಿಸಲಾಯಿತು. ಗಮಕ ವಿದ್ವಾಂಸರಾದ ನಿರ್ಮಲಾ ಪ್ರಸನ್ನ, ನರಸಿಂಹಯ್ಯ, ಶ್ಯಾಮಸುಂದರ್, ರಾಜೇಶ್ವರಿ, ನಾಗು ಪ್ರವೀಣ್, ಸುರೇಶ್ ಜಮದಗ್ನಿ, ವೆಂಕಟಸುಬ್ಬಯ್ಯ, ಎ.ವಿ.ನಾಗೇಶ್ ಉಪಸ್ಥಿತರಿದ್ದರು.

### ಮಾದರಿಯಾದ ಚಿಕ್ಕ ಸೋರೆಕಾಯಿಪುರದ ಅಣ್ಣೇಗೌಡ | 3 ಎಕರೆ ಜಮೀನಿನಲ್ಲಿ ಬಗೆ ಬಗೆಯ ಬೆಳೆಗಳು

# ಸಾವಯುವ-ಸಮಗ್ರ ಕೃಷಿಯಿಂದ ಖುಷಿ ಕಂಡ ರೈತ

-ಆರ್.ಶ್ರೀನಿವಾಸ್ ಉಳ್ಳಾವಳ್ಳಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸಾವಯವ ಹಾಗು ಸಮಗ್ರ ಕೃಷಿ ಪದ್ಧತಿ ಅನುಸರಿಸಿ ಹೆಚ್ಚು ಲಾಭ ಗಳಿಸುವ ಮೂಲಕ ತಾಲ್ಲೂಕಿನ ಚಿಕ್ಕ ಸೋರೆ ಕಾಯಿಪುರ ಗ್ರಾಮದ ಅಣ್ಣೇಗೌಡ (ಮೂರ್ತಿ) ಅವರು ಯುವ ಸಮುದಾಯಕ್ಕೆ ಮಾದರಿಯಾಗಿದ್ದಾರೆ.

ತಮಗಿರುವ 3 ಎಕರೆ ಜಮೀನಿನಲ್ಲಿ 100 ತೆಂಗಿನ ಮರಗಳು, 300 ಅಡಿಕೆ ಮರ, ಏಲಕ್ಕಿ, ಮೆಣಸು, ಸಪೋಟ, ದಾಳಿಂಬೆ, ಸ್ಟಾರ್ ಫ್ರೂಟ್, ಬಟರ್ ಫ್ರೂಟ್, ವಾಟರ್ ಆ್ಯಪಲ್, ಸೀಬೆ, ನಿಂಬೆ ಸೇರಿ ವಿವಿಧ ಬಗೆಯ ಹಣ್ಣಿನ ಗಿಡಗಳನ್ನು ಬೆಳೆಸಿದ್ದಾರೆ. ಪುಟ್ಟ ಬಾಳೆ, ಪಚ್ಚ ಬಾಳೆ, ರಸಬಾಳೆ, ಬೂದು ಬಾಳೆ ಹಾಗು ಕೆಂಪು ಸೇರಿ ವಿವಿಧ ಪ್ರಭೇದದ ಎಂಟು ತಳಿಯ ಬಾಳೆ ಬೆಳೆಯುವ ಮೂಲಕ ಗಮನ ಸೆಳೆದಿದ್ದಾರೆ.

ರೈತ ಅಣ್ಣೇಗೌಡ ತಮ್ಮ ಜಮೀನಿನಲ್ಲಿರುವ ಎಲ್ಲಾ ಬೆಳೆಗಳಿಗೂ ಹನಿ ನೀರಾವರಿ ಪದ್ಧತಿಯೊಂದಿಗೆ ಗಿಡ, ಮರಗಳು ಹಾಗು ಬೆಳೆಗಳಿಗೆ ನೀರು ಉಣಿಸುವ ವ್ಯವಸ್ಥೆ ಮಾಡಲಾಗಿದೆ. ಕಳೆದ 10-12 ವರ್ಷಗಳಿಂದ ಯಾವುದೇ ರಾಸಾಯನಿಕ ಗೊಬ್ಬರ ಹಾಗು ಔಷಧಿ ಬಳಸದೆ ಸಾವಯವ ಕೃಷಿ ಅನುಸರಿಸಿದ್ದಾರೆ. ಮನೆಯ ಮುಂಭಾಗ ದಲ್ಲಿ ಸುಮಾರು 3 ಗುಂಟೆ ಜಾಗದಲ್ಲಿ ಕೈತೋಟ ಮಾಡಿಕೊಂಡು ಮನೆಗೆ ಬೇಕಾಗುವ ಹಾಗು ಸಾಕಾಗುವಷ್ಟು ಸೊಪ್ಪು, ತರಕಾರಿಗಳನ್ನು ಬೆಳೆದು ಉಪಯೋಗಿಸುತ್ತಿದ್ದಾರೆ.





**ಕೃಷಿಯೊಂದಿಗೆ ಹೈನುಗಾರಿಕೆ**

ಮೂರು ಎಮ್ಮೆಗಳು, ನಾಲ್ಕು ನಾಟಿ ಹಸುಗಳು ಹಾಗು 25ಕ್ಕೂ ಹೆಚ್ಚು ಮೇಕೆಗಳನ್ನು ಸಾಕಿದ್ದು ತಮ್ಮ ಜಮೀನಿಗೆ ಸಾಕಾಗುವಷ್ಟು ಕೊಟ್ಟಿಗೆ ಗೊಬ್ಬರವನ್ನು ಪಡೆಯುತ್ತಿದ್ದಾರೆ. ಅಗತ್ಯ ಇದ್ದಲ್ಲಿ ವರ್ಷದಲ್ಲಿ ಒಂದೆರಡು ಬಾರಿ ಬೇರೆ ರೈತರಿಂದ ತಿಪ್ಪೆ ಗೊಬ್ಬರ ಖರೀದಿಸಿ ಬೆಳೆಗಳಿಗೆ ನೀಡುವ ವ್ಯವಸ್ಥೆ ಮಾಡಿಕೊಂಡಿದ್ದಾರೆ. ಕಳೆದ ಹತ್ತು ವರ್ಷಗಳ ಹಿಂದೆ ಯಾವುದೇ ಬೆಳೆಗಳಿಂದ ಹೆಚ್ಚು ಲಾಭ ಸಿಗುತ್ತಿರಲಿಲ್ಲ. ಆದರೆ, ಸಾವಯುವ ಕೃಷಿ ಅನುಸರಿಸಿದ ನಂತರ ಎಲ್ಲಾ ಬೆಳೆಗಳಲ್ಲಿಯೂ ಹೆಚ್ಚಿನ ಇಳುವರಿಯೊಂದಿಗೆ ಸಾಕಷ್ಟು ಲಾಭ ಸಿಗುತ್ತಿದೆ ಎಂದು ರೈತ ಅಣ್ಣೇಗೌಡ ಅವರು ಅನುಭವ ಹಂಚಿಕೊಂಡಿದ್ದಾರೆ.

**ಸಾವಯವ ಕೃಷಿಯಿಂದ ಉತ್ತಮ ಇಳುವರಿ**

ಸಾವಯವ ಕೃಷಿ ಅನುಸರಿಸುವ ಮೊದಲು 1 ಸಾವಿರ ಕೊಬ್ಬರಿಗೆ 140 ಕೆಜಿ ಇಳುವರಿ ಸಿಗು ತ್ತಿತ್ತು. ಆದರೆ, ಸಾವಯವ ಕೃಷಿ ಅನುಸರಿಸಿದ ಬಳಿಕ ಒಂದು ಸಾವಿರ ಕೊಬ್ಬರಿಯಿಂದ ಸರಿ ಸುಮಾರು 185ರಿಂದ 190 ಕೆಜಿವರೆಗೂ ಇಳು ವರಿ ಸಿಗುತ್ತಿದೆ. ಇನ್ನು ತೋಟದಲ್ಲಿ ಇರುವ ಏಲಕ್ಕಿ, ಮೆಣಸು ಹಾಗು ಹಣ್ಣಿನ ಗಿಡಗಳಿಂದ ಸಾಕಷ್ಟು ಆದಾಯ ಸಿಗುತ್ತಿದೆ.

ಅಣ್ಣೇಗೌಡ ಅವರು ಕಳೆದ ಹತ್ತು ವರ್ಷಗಳ ಹಿಂದೆ ವಿದ್ಯುತ್ ಪಂಪ್‌ಸೆಟ್ ಹಾಗು ಮೋಟರ್ ವೈಂಡಿಂಗ್ ಕೆಲಸ ಮಾಡಿಕೊಂಡಿದ್ದರು. ಅನಿರೀಕ್ಷಿತ ಕೃಷಿಯತ್ತ ಮುಖ ಮಾಡಿದ ಬಳಿಕ ನಿರೀಕ್ಷೆಯಂತೆ ಲಾಭ ಸಿಕ್ಕಿದ್ದರಿಂದ ಕೃಷಿ ಚಟುವಟಿಕೆಯತ್ತಾ ಆಸಕ್ತಿ ವಹಿಸಿದ್ದು ಜೊತೆಗೆ ಸಾವಯವ ಹಾಗು ಸಮಗ್ರ ಕೃಷಿ ಅನುಸರಿಸುವ ಮೂಲಕ ಯಶಸ್ಸು ಕಂಡಿದ್ದಾರೆ.

**ಸಾವಯವ ಹಾಗು ಸಮಗ್ರ ಕೃಷಿ ಅನುಸರಿಸಿದರೆ ಮಣ್ಣಿನ ಆರೋಗ್ಯದ ಜೊತೆಗೆ ಮನುಷ್ಯನ ಆರೋಗ್ಯವು ಸುಧಾರಣೆ ಕಾಣಲಿದೆ. ಪ್ರಾರಂಭದಲ್ಲಿ ಸಮಸ್ಯೆಯಾದರೂ ನಂತರದ ದಿನಗಳಲ್ಲಿ ಎಲ್ಲವೂ ಸರಿಯಾಗಲಿದೆ. ಸಾವಯವ ಕೃಷಿ ಅನುಸರಿಸಿದ ನಂತರ ನಿರೀಕ್ಷೆಯಂತೆ ಲಾಭ ಕಂಡಿದ್ದೇನೆ.**
**-ಅಣ್ಣೇಗೌಡ, ಸಾವಯವ ಕೃಷಿಕ, ಚಿಕ್ಕ ಸೋರೆಕಾಯಿಪುರ**

**ಇತ್ತೀಚಿನ ದಿನಗಳಲ್ಲಿ ಸಾವಯವ ಹಾಗು ಸಮಗ್ರ ಕೃಷಿಯತ್ತ ರೈತರು ಮುಖ ಮಾಡುತ್ತಿರು ವುದು ಒಳ್ಳೆಯ ಬೆಳವಣಿಗೆ. ಅದಕ್ಕೆ ಪೂರಕವಾಗಿ ಸರ್ಕಾರವು ಯೋಜನೆಗಳನ್ನು ರೂಪಿಸುವುದರ ಜೊತೆಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿದರೆ ಸಾವಯವ ಹಾಗು ಸಮಗ್ರ ಕೃಷಿಯನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯಬಹುದು.**
**-ತುಳಸಿರಾಜ್, ರೈತ ಸಲಹೆಗಾರ, ಕರಿಕ್ಯಾತನಹಳ್ಳಿ**

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019